# ಧೈರ್ಯದ ದಾರಿ

ನಿಮ್ಮ ನಂಬಿಕೆಯ ಧ್ವನಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 09

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶುಕ್ರವಾರ: 12–12–2025



ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626


# ಸಿದ್ದು ಸಿಎಂ, ಯತೀಂದ್ರ ಪುನರುಚ್ಚಾರ

**ಬೆಳಗಾವಿ, ಡಿ. 11–**ಮಳೆ ನಿಂತರೂ ಹನಿ ನಿಲ್ಲಿಲ್ಲ ಎಂಬಂತೆ ನಾಯಕತ್ವ ಬದಲಾವಣೆ ಬಗ್ಗೆ ಯಾರೂ ಬಹಿರಂಗವಾಗಿ ಮಾತನಾಡಬಾರದು ಎಂದು ಹೈಕಮಾಂಡ್ ತಾಕೀತು ಮಾಡಿದ್ದರೂ ಮುಖ್ಯಮಂತ್ರಿ ಸಿದ್ಧರಾಮಯ್ಯ ಪುತ್ರ ಹಾಗೂ ವಿಧಾನಪರಿಷತ್ ಸದಸ್ಯ ಯತೀಂದ್ರ ಸಿದ್ಧರಾಮಯ್ಯ, ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಇಲ್ಲ, ಸಿದ್ಧರಾಮಯ್ಯ ಅವರೇ ಮುಂದಿನ ಐದು ವರ್ಷ ಮುಖ್ಯಮಂತ್ರಿ ಎಂಬ ಮಾತುಗಳನ್ನು ಪುನರುಚ್ಚರಿಸಿದ್ದಾರೆ.

ಕಳೆದ ಸೋಮವಾರ ಬೆಳಗಾವಿ ವಿಧಾನಮಂಡಲದ ಅಧಿವೇಶನದ ಮೊದಲ ದಿನವೇ ಯತೀಂದ್ರ ಸಿದ್ದರಾಮಯ್ಯ ಅವರು ಹೈಕಮಾಂಡ್ ರಾಜ್ಯದಲ್ಲಿ ನಾಯಕತ್ವ ಬದಲಾವಣೆಯ ಪರಿಸ್ಥಿತಿ ಇಲ್ಲ ಎಂಬ ತೀರ್ಮಾನಕ್ಕೆ ಬಂದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಐದು ವರ್ಷ ಪೂರ್ಣಾವಧಿ ಇರುತ್ತಾರೆ ಎಂದು ಹೇಳಿಕೆ ನೀಡಿರುವುದು ಕಾಂಗ್ರೆಸ್‌ನಲ್ಲಿ ಸಂಚಲನಕ್ಕೆ ಕಾರಣವಾಗಿ ಕೆಲ ಶಾಸಕರು ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆಗೆ ಬಹಿರಂಗವಾಗಿಯೇ ವಿರೋಧ ವ್ಯಕ್ತಪಡಿಸಿದರು.



ಇದಾದ ನಂತರ ಸಿದ್ದರಾಮಯ್ಯ ಅವರು ತಮ್ಮ ಪುತ್ರನನ್ನು ಬೆಳಗಾವಿಯ ಸರ್ಕ್ಯೂಟ್ ಹೌಸ್‌ಗೆ ಕರೆಸಿಕೊಂಡ ನಾಯಕತ್ವ ಬದಲಾವಣೆ ಬಗ್ಗೆ ಮಾತನಾಡದಂತೆ ತಾಕೀತು ಮಾಡಿದ್ದರು. ಮಂಗಳವಾರ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲೂ ನಾಯಕತ್ವ ಬದಲಾವಣೆ ಬಗ್ಗೆ ಯಾರೂ ಮಾತನಾಡಬಾರದು. ಹೈಕಮಾಂಡ್ ನಿರ್ಧಾರವೇ ಅಂತಿಮ ಎಂದು ಮುಖ್ಯಮಂತ್ರಿಗಳು ಹೇಳಿದ್ದರೂ ಇಷ್ಟೆಲ್ಲಾ ಬೆಳವಣಿಗೆಗಳು ಆದ ನಂತರವೂ ಯತೀಂದ್ರ ಸಿದ್ದರಾಮಯ್ಯ ಅವರು ಇಂದು ಮತ್ತೆ ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಇಲ್ಲ ಎಂಬ ಸ್ಫೋಟಕ ಹೇಳಿಕೆ ನೀಡಿರುವುದು ಕಾಂಗ್ರೆಸ್‌ನಲ್ಲಿ ಉರಿಯುವ ಬೆಂಕಿಗೆ ತುಪ್ಪ ಸುರಿದಂತಾಗಿದೆ.

ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಯತೀಂದ್ರ ಸಿದ್ದರಾಮಯ್ಯ, ಮುಖ್ಯಮಂತ್ರಿ ಬದಲಾವಣೆಗೆ ಹೈಕಮಾಂಡ್ ಒಪ್ಪಿಲ್ಲ ಎಂದು ಹೇಳಿದ್ದಾರೆ. ಇವರ ಈ ಹೇಳಿಕೆ ಕಾಂಗ್ರೆಸ್‌ನ ಹಲವು ಶಾಸಕರ ಅದರಲ್ಲೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜತೆ ಗುರುತಿಸಿಕೊಂಡಿರುವ ಶಾಸಕರ ಕೆಂಗಣ್ಣಿಗೆ ಕಾರಣವಾಗಿದೆ.

ವಿಧಾನಸಭೆಯ ಅಧಿವೇಶನಕ್ಕೂ ಮುನ್ನ ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಜಟಾಪಟಿ ತಾರಕಕ್ಕೇರಿತ್ತು. ಕೆಲ ಶಾಸಕರು ದೆಹಲಿ ಯಾತ್ರೆಯನ್ನು ನಡೆಸಿದ್ದರು.

ಇಷ್ಟೆಲ್ಲಾ ಬೆಳವಣಿಗೆಗಳ ನಂತರ ಹೈಕಮಾಂಡ್ ಮಧ್ಯ ಪ್ರವೇಶಿಸಿ ಈ ಬಗ್ಗೆ ಹೈಕಮಾಂಡ್ ತೀರ್ಮಾನ 2ನೇಪುಟಕ್ಕೆ►

# ಇನ್ನೂ ಬಗೆಹರಿದಿಲ್ಲ ಇಂಡಿಗೋ ಸಮಸ್ಯೆ



**ಮುಂಬೈ, ಡಿ. 11 –** ಹೊಸ ಪೈಲಟ್ ಮತ್ತು ಸಿಬ್ಬಂದಿ ಕರ್ತವ್ಯ ಮಾನದಂಡಗಳ ಅನುಷ್ಠಾನಕ್ಕೆ ಸಂಬಂಧಿಸಿದ ಯೋಜನಾ ವೈಫಲ್ಯಗಳಿಂದಾಗಿ ಸೇವೆಗಳಲ್ಲಿ ದೊಡ್ಡ ಪ್ರಮಾಣದ ಅಡಚಣೆಗಳು ಕಂಡುಬಂದ ಹಿನ್ನೆಲೆಯಲ್ಲಿ, ಸುರಕ್ಷತಾ ಕಾವಲು ಸಂಸ್ಥೆ ಡಿಜಿಸಿಎ ತನ್ನ ಪರಿಶೀಲನೆಯನ್ನು ಬಿಗಿಗೊಳಿಸಿದ್ದರಿಂದ, ಬಿಕ್ಕಟ್ಟಿನಿಂದ ಬಳಲುತ್ತಿರುವ ಇಂಡಿಗೋ ಇಂದು ಬೆಂಗಳೂರು ವಿಮಾನ ನಿಲ್ದಾಣದಿಂದ 60 ವಿಮಾನಗಳನ್ನು ರದ್ದುಗೊಳಿಸಿದೆ ಎಂದು ಮೂಲಗಳು ತಿಳಿಸಿವೆ.

ಇಂಡಿಗೋ 60 ವಿಮಾನಗಳನ್ನು ರದ್ದುಗೊಳಿಸಿದೆ 32 ಆಗಮನ ಮತ್ತು 28 ನಿರ್ಗಮನಗಳು ಬೆಂಗಳೂರು ವಿಮಾನ ನಿಲ್ದಾಣದಿಂದ ರದ್ದಾಗಿವೆ ಎಂದು ಮೂಲಗಳು ತಿಳಿಸಿವೆ.

ಏತನ್ಮಧ್ಯೆ, ಇಂಡಿಗೋ ಸಿಇಒ ಪಿಟರ್ ಎಲ್ಬರ್ಸ್ ಅವರಿಗೆ ನಾಗರಿಕ ವಿಮಾನಯಾನ ನಿರ್ದೇಶನಾಲಯ (ಡಿಜಿಸಿಎ) ಇತ್ತಿ?ಚಿನ ಕಾರ್ಯಾಚರಣೆಯ ಅಡಚಣೆಗಳ ಕುರಿತು ಡೇಟಾ ಮತ್ತು ನವೀಕರಣಗಳನ್ನು ಒಳಗೊಂಡಂತೆ ಸಮಗ್ರ ವರದಿಯನ್ನು ಸಲ್ಲಿಸಲು ಸಮನ್ಸ್ ಜಾರಿ ಮಾಡಿದೆ.

ನಿನ್ನೆ ಇಂಡಿಗೋ ಮೂರು ಪ್ರಮುಖ ವಿಮಾನ ನಿಲ್ದಾಣಗಳಾದ ದೆಹಲಿ, ಬೆಂಗಳೂರು ಮತ್ತು 2ನೇಪುಟಕ್ಕೆ►

# ಕರ್ನಾಟಕ ರಾಜ್ಯ ಗ್ರಾಮ ಪಂಚಾಯತ್ ನೌಕರರ ಸಂಘ ಮಾನ್ವಿ ಘಟಕದ ವತಿಯಿಂದ ಕಾರ್ಯನಿರ್ವಾಹಕ ಅಧಿಕಾರಿಗೆ ಮನವಿ.

ಧೈರ್ಯದ ದಾರಿ

**ಮಾನ್ವಿ,ಡಿ.11–** ತಾಲೂಕಿನ ಊಟಕನೂರು ಗ್ರಾಮ ಪಂಚಾಯತಿ ಸಿಬ್ಬಂಧಿ ವೇತನ ತಡೆಹಿಡಿದಿರುವ ಬ್ಯಾಂಕಿನ ಖಾತೆಯನ್ನು ಮರು ಚಾಲನೆ ನೀಡಿ ತಡೆಹಿಡಿರುದಿರುವುದನ್ನು ತೆರವುಗೋಳಿಡಬೇಕೆಂದು ಆಗ್ರಹಹಿಸಿತು.ಊಟಕನೂರು ಗ್ರಾಮ ಪಂಚಾಯತಿಯಲ್ಲಿ ಕಾರ್ಯನಿರ್ವಾಹಿಸುತ್ತಿರುವ ಸಿಬ್ಬಂದಿಗಳಿಗೆ ಅಕ್ಟೋಬರ್ ಮತ್ತು ನವೆಂಬರ್ ತಿಂಗಳ ಇ.ಎಫ್.ಎಂ.ಎಸ್. ವೇತನ ಬಾಕಿ ಇರುತ್ತದೆ. ಸದರಿ ಬಾಕಿ ಇರುವ ಎರಡು ತಿಂಗಳ ವೇತನವನ್ನು ತಮ್ಮ ಆದೇಶದಂತೆ ಮಂಜೂರು ಮಾಡಿರುತ್ತಾರೆ. ಆದರೆ ಸದರಿ ಊಟಕನೂರು ಗ್ರಾಮ ಪಂಚಾಯತಿಯಲ್ಲಿ ಅವ್ಯವಹಾರ ನಡೆದಿದೆ ಎಂದು ಸದರಿ ಪಂಚಾಯತಿಯ ಎಲ್ಲಾ ಸಿಬ್ಬಂಧಿ ವೇತನ ಬ್ಯಾಂಕ್ ಖಾತೆಗಳನ್ನು ಬ್ಲಾಕ್ ಮಾಡಲಾಗಿರುತ್ತದೆ. ಇದರಿಂದ ನಮಗೆ ವೇತನ ಪಡೆಯಲು ತೊಂದರೆಯಾಗಿರುತ್ತದೆ. ಅದಕ್ಕಾಗಿ ನಮ್ಮ ಸಂಘಟನೆಯ



ವತಿಯಿಂದ ಉಲ್ಲೇಖ (1) ರನ್ವಯ ಈ ಮೇಲ್ಕಾಣಿಸಿದ ದಿನಾಂಕಗಳಂದು ಮನವಿ ಪತ್ರ ಸಲ್ಲಿಸಿದ್ದು ಇರುತ್ತದೆ. ತಾವುಗಳು ಊಟಕನೂರು ಗ್ರಾಮ ಪಂಚಾಯತಿಯ ವೇತನ ತಡೆಹಿಡಿದಿರುವ ಬ್ಯಾಂಕಿನ ಖಾತೆಯನ್ನು ಮರು ಚಾಲನೆ ನೀಡಿ ಸಿಬ್ಬಂಧಿಗಳ ಖಾತೆಗಳನ್ನು ತಡೆಹಿಡಿರುದಿರುವುದನ್ನು ತೆರವುಗೊಳಿ ನಮಗೆ ಮಂಜೂರಾದ ವೇತನ ಪಾವತಿ ಮಾಡಿಕೊಳ್ಳಲು ಅನುಕೂಲ ಮಾಡಿಕೊಡಬೇಕೆಂದು ಈ ಮೂಲಕ ಕರ್ನಾಟ ರಾಜ್ಯ ಗ್ರಾಮ ಪಂಚಾಯತ ನೌಕರರ ಸಂಘ (ರಿ) (ಸಿ.ಐ.ಟಿ.ಯು ಸಂಯೋಜಿತ) ತಾಲೂಕ ಘಟಕ ಮಾನವಿ ಈ ಮೂಲಕ ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಲಾಯಿತು.


ಒಂದು ವೇಳೆ ಈ ನಮ್ಮ ಮನವಿಯನ್ನು ಸ್ವೀಕರಿಸಿ 3 ದಿನಗಳೊಳಗಾಗಿ ಸಿಬ್ಬಂದಿ ವೇತನವನ್ನು ಪಾವತಿಸುವಲ್ಲಿ ವಿಳಂಭ ತೋರಿದ್ದಲ್ಲಿ ತಮ್ಮ ಗ್ರಾಮ ಪಂಚಾಯತಿ ಕಾರ್ಯಲಯದ ಮುಂದೆ ಕಾರ್ಯ ಸ್ಥಗಿತಗೊಳಿಸಿ ಧರಣಿ ಹಮ್ಮಿಕೊಳ್ಳಲಾಗುವುದೆಂದು ಈ ಮೂಲಕ ತಮಗೆ ತಿಳಿಯಬಯಸುತ್ತೇವೆ. ಈ ಸಂದರ್ಭದಲ್ಲಿ ಅಂಬಣ್ಣ ನಾಯಕ ಅಧ್ಯಕ್ಷರು ಕರ್ನಾಟಕ ರಾಜ್ಯ ಗ್ರಾಮ ಪಂಚಾಯತ್ ನೌಕರರ ಸಂಘ (ರಿ) ಮಾನ್ವಿ, ಪ್ರಧಾನ ಕಾರ್ಯದರ್ಶಿಯಾದ ಸುಭಾನ್ ಚಿಕ್ಕೋಟ್ನೆಕಲ್, ಕಾರ್ಯಧಕ್ಷರು ಮಹಮ್ಮದ್ ನೀರಮಾನ್ವಿ ಇನ್ನಿತರರು ಉಪಸ್ಥಿತರಿದ್ದರು.

# ಸರಕಾರಿ ಬಿ.ಇಡಿ, ಕಾನೂನು ಪದವಿ ಮಹಾವಿದ್ಯಾಲಯಗಳನ್ನು ಜಾರಿಗೊಳಿಸಲು ಬಂಡೆಗುರು ಕರೇಗುಡ್ಡ ಆಗ್ರಹ

ಧೈರ್ಯದ ದಾರಿ

**ಮಾನ್ವಿ,ಡಿ.11–**ಸರಕಾರಿ ಬಿ.ಇಡಿ ಮತ್ತು ಸರ್ಕಾರಿ ಕಾನೂನು ಪದವಿ ಮಹಾವಿದ್ಯಾಲಯಗಳನ್ನು ಮಾನ್ವಿ ತಾಲೂಕಿನಲ್ಲಿ ಸಚಿವರು ಮತ್ತು ಶಾಸಕರು ಮಂಜೂರುಗೊಳಿಸಬೇಕೆಂದು ದಲಿತ ವಿದ್ಯಾರ್ಥಿ ಪರಿಷತ್ ತಾಲೂಕು ಸಮಿತಿಯ ಬಂಡೇಗುರು ಕರೇಗುಡ್ಡ ಆಗ್ರಹಿಸಿದರು.

ಮಾನ್ವಿ ನಗರವು ಎಲ್ಲಾ ರಂಗಗಳಲ್ಲೂ ಮುಂದುವರೆದಿರುವ ತಾಲೂಕು ಎನ್ನುವ ಹೆಗ್ಗಳಿಕೆಯನ್ನು ಹೊಂದಿದೆ. ಆದರೆ ಶೈಕ್ಷಣಿಕವಾಗಿ ಇನ್ನೂ ಹೆಚ್ಚಿನ ಅಭಿವೃದ್ಧಿ



ಹೊಂದಬೇಕಾಗಿದೆ. ಆ ನಿಟ್ಟಿನಲ್ಲಿ ನಮ್ಮ ತಾಲೂಕಿಗೆ ಸರ್ಕಾರಿ ಬಿ.ಇಡಿ ಕಾಲೇಜು ಮತ್ತು ಸರ್ಕಾರಿ ಕಾನೂನು ಮಹಾವಿದ್ಯಾಲಯದ ಅವಶ್ಯ ಮತ್ತು ಈ ಭಾಗದ ಅಸಂಖ್ಯಾತ ವಿದ್ಯಾರ್ಥಿಗಳ ಬಹುದೊಡ್ಡ ಬೇಡಿಕೆಯಾಗಿದೆ. ಈ ಎರಡು ಕಾಲೇಜುಗಳನ್ನು ನಮ್ಮ ತಾಲೂಕಿಗೆ ಸರ್ಕಾರದಿಂದ ಮಂಜೂರು ಮಾಡಿಸಿದರೆ ವಿದ್ಯಾರ್ಥಿಗಳು ಬೇರೊಂದು ತಾಲೂಕು ಅಥವಾ ಜಿಲ್ಲೆಗಳಿಗೆ ವಿದ್ಯಾಭ್ಯಾಸಕ್ಕಾಗಿ ವಲಸೆ ಹೋಗುವ ಅವಶ್ಯಕತೆ ಇರುವುದಿಲ್ಲ. ಆದ್ದರಿಂದಾಗಿ ನಮ್ಮ ತಾಲೂಕಿಗೆ ಈ ಎರಡು ಕಾಲೇಜುಗಳನ್ನು ಮಂಜೂರು ಮಾಡಿಸಲು ಬೆಳಗಾವಿಯಲ್ಲಿ ನಡೆದಿರುವ ಅಧಿವೇಶನ ದಲ್ಲಿ ಧ್ವನಿ ಎತ್ತಿ, ನಮ್ಮ ಭಾಗದ ಸಹಸ್ರ ಸಹಸ್ರ ವಿದ್ಯಾರ್ಥಿಗಳ ಬೇಡಿಕೆಯನ್ನು ಈಡೇರಿಸಲು ದಲಿತ ವಿದ್ಯಾರ್ಥಿ ಪರಿಷತ್ ವತಿಯಿಂದ ಆಗ್ರಹಿಸಲಾಯಿತು

# ಲೊಯೋಲ ಸಮಾಜ ಸೇವಾ ಕೇಂದ್ರದಿಂದ ವಿಶ್ವ ಮಾನವ ಹಕ್ಕುಗಳ ದಿನ ಆಚರಣೆ



ಧೈರ್ಯದ ದಾರಿ

**ಮಾನ್ವಿ,ಡಿ.11–**ತಾಲೂಕಿನ ಚಿಮ್ಲಾಪುರ ಗ್ರಾಮದಲ್ಲಿ ವಿಶ್ವ ಮಾನವ ಹಕ್ಕುಗಳ ದಿನದ ಅಂಗವಾಗಿ ಹಕ್ಕುಗಳ ಕುರಿತಾದ ಸಾಮಾಜಿಕ ಅರಿವಿನ ನಾಟಕ ಮತ್ತು ನೃತ್ಯಗಳ ಮುಖಾಂತರ ಜಾಗೃತಿ ಕಾರ್ಯ ಕ್ರಮವನ್ನು ಗ್ರಾಮದ ಮಾರಿಕಾಂಭಾ ದೇವಸ್ಥಾನದ ಆವರಣದಲ್ಲಿ ಏರ್ಪಡಿಸಲಾಗಿತ್ತು.

ಲೊಯೋಲ ಸಮಾಜ ಸೇವಾ ಕೇಂದ್ರ, ಮಾನ್ವಿ ಹಾಗೂ ಸಂತ ಜೋಸೆಫರ ಪದವಿ ಪೂರ್ವ ಕಾಲೇಜ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಹಳ್ಳಿಯ ಅನುಭವ 'ಕ್ಕಾಗಿ ಬೆಂಗಳೂರಿನಿಂದ ಆಗಮಿಸಿದ್ದ 60 ವಿದ್ಯಾರ್ಥಿಗಳ ತಂಡವು ವಿಶ್ವ ಮಾನವ ಹಕ್ಕುಗಳ ದಿನಾಚರಣೆ ಹಾಗೂ ಹವಾಮಾನ ವೈಪಾರಿತ್ಯ ಕುರಿತು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚಾರಿಸಿ ಜಾಗೃತಿ ಜಾಥ ಮಾಡಲಾಯಿತು ಮತ್ತು ಹಕ್ಕುಗಳ ಕುರಿತು ಕಿರು ಬೀದಿ ನಾಟಕದ ಮೂಲಕ ಅರಿವಿನ ಕಾರ್ಯಕ್ರಮವನ್ನು ನೀಡಲಾಯಿತು. ನಂತರದಲ್ಲಿ ಮಾನವಿಯ ಬುಡಗ ಜಂಗಮ ಕಾಲೋನಿಗೆ ಭೇಟಿ ನೀಡಿ ಅಲ್ಲಿಯ ಅಲೆಮಾರಿ ಜನಾಂಗದವರ ಜೊತೆ ಸಂವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಅಲ್ಲಿನ ಹಿರಿಯರು ತಮ್ಮ ಜೀವನ ಶೈಲಿ ಹಾಗೂ ತಾವು ಅನುಭವಿಸಿದ ಕಷ್ಟದ ದಿನಗಳ ಕುರಿತು ಮಾಹಿತಿಯನ್ನು ಮಕ್ಕಳೊಡನೆ ಹಂಚಿಕೊಂಡರು. ಅಲ್ಲಿಯೂ ಕೂಡಾ ಮಾನವ ಹಕ್ಕುಗಳ ಕುರಿತು ಅರಿವಿನ ಕಾರ್ಯಕ್ರಮವನ್ನು ನೀಡಿದರು.

ಈ ಕಾರ್ಯಕ್ರಮದಲ್ಲಿ ಸಂತ ಜೋಸೆಫರ ಪದವಿ ಪೂರ್ವ ಕಾಲೇಜು, ಬೆಂಗಳೂರಿನ ನಿರ್ದೇಶಕರಾದ ಫಾ.ಅಶ್ವಿನ್ ಎಸ್.ಜೆ ಅವರು ಹಾಗೂ 5 ಜನ ಸಿಬ್ಬಂಧಿಗಳು ಭಾಗವಹಿಸಿದ್ದರು. ಲೊಯೋಲ ಸಮಾಜ ಸೇವಾ ಕೇಂದ್ರದ ಸಿಬ್ಬಂಧಿಗಳಾದ ರವೀಂದ್ರ ಜಾನೇಕಲ್, ಮರಿಯಪ್ಪ, ಬಸವಲಿಂಗಪ್ಪ, ಬಸವರಾಜ, ವಿಜಯಲಕ್ಷ್ಮೀ ಹಾಗೂ ತಿಮಲಮ್ಮ ಇವರು ಭಾಗವಹಿಸಿದ್ದರು.

# ತಾಯಿ, ಮಕ್ಕಳ ಆಸ್ಪತ್ರೆಗೆ ಜಿಪಂ ಸಿಇಓ ಈಶ್ವರ ಕಾಂದೂ ದಿಢೀರ್ ಭೇಟಿ; ಪರಿಶೀಲನೆ

ಧೈರ್ಯದ ದಾರಿ

**ರಾಯಚೂರು,ಡಿ.11–** ನಗರದಲ್ಲಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಡಿ.11 ರಂದು ದಿಢೀರ್ ಭೇಟಿ ನೀಡಿ ಆಸ್ಪತ್ರೆಯಲ್ಲಿನ ಮೂಲಭೂತ ಸೌಕರ್ಯಗಳ ಬಗ್ಗೆ ಪರಿಶೀಲಿಸಿದರು.

ಆಸ್ಪತ್ರೆಯ ನಾನಾ ವಾರ್ಡ್ಗಳಿಗೆ ಸಂಚರಿಸಿ ಭಾಣಂತಿಯರ ಮತ್ತು ಶಿಶುಗಳ ಯೋಗಕ್ಷೇಮ ವಿಚಾರಿಸಿದರು. ಸರಿಯಾದ ರೀತಿಯಲ್ಲಿ ಊಟ ಕೊಡುತ್ತಾರಾ? ಚಿಕಿತ್ಸೆ ಮತ್ತು ಔಷಧಿ ಸರಿಯಾಗಿ ನೀಡುತ್ತಾರಾ? ಎಂದು ಕೇಳಿ ಮಾಹಿತಿ ಪಡೆದುಕೊಂಡರು. ಆಸ್ಪತ್ರೆಯಲ್ಲಿ ನಮಗೆ ಸರಿಯಾದ ಚಿಕಿತ್ಸೆ ದೊರೆಯುತ್ತಿದೆ ಎಂದು ಭಾಣಂತಿಯರು ಪ್ರತಿಕ್ರಿಯಿಸಿದರು.

ರಾತ್ರಿ ವೇಳೆಯಲ್ಲೂ ಚಿಕಿತ್ಸೆ ನೀಡಿ: ಜಿಲ್ಲೆಯ ಯಾವುದೇ ಗ್ರಾಮದಿಂದ ರಾತ್ರಿ ವೇಳೆಯಲ್ಲಿ ತುರ್ತು ಚಿಕಿತ್ಸೆ ಕೋರಿ ಬರುವ ಬಾಣಂತಿಯರಿಗೆ ವೈದ್ಯರು ಮತ್ತು ಆಸ್ಪತ್ರೆಯಲ್ಲಿನ ಸಿಬ್ಬಂದಿ ತಕ್ಷಣವೇ ಸ್ಪಂದನೆ ನೀಡಬೇಕು. ಯಾವುದೇ ನೆಪ ಹೇಳದೇ ಬೇರೆಡೆ ಕಳುಹಿಸಬಾರದು. ಪ್ರಥಮ ಹಂತದ ಚಿಕಿತ್ಸೆಗೆ ಕ್ರಮವಹಿಸಿ, ಹೆಚ್ಚಿನ ಚಿಕಿತ್ಸೆಯ ಅವಶ್ಯವಿದ್ದರೆ ಮಾತ್ರ ಬೇರೆಡೆ ಕಳುಹಿಸಲು ಕ್ರಮವಹಿಸಬೇಕು ಎಂದು ಸಿಇಓ ಅವರು ಇದೆ ವೇಳೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಅಕ್ಕ ಕೆಫೆ ಕಾಮಗಾರಿ ಪರಿಶೀಲನೆ: ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಆವರಣದಲ್ಲಿ ನಿರ್ಮಾಣವಾಗುತ್ತಿರುವ ಅಕ್ಕ ಕೆಫೆ ಕಾಮಗಾರಿಯನ್ನು ಸಿಇಓ ಅವರು ವೀಕ್ಷಣೆ



ಮಾಡಿ, ಗುಣಮಟ್ಟದ ಕಾಮಗಾರಿ ನಡೆಸಲು ಸೂಚನೆ ನೀಡಿದರು. ನೂತನ ಪೌಷ್ಟಿಕ ಪುನಶ್ಚೇತನ ಕೇಂದ್ರ ಸ್ಥಾಪನೆಗೆ ಸಿದ್ದತೆ ಮಾಡಿಕೊಳ್ಳಲು ಇದೆ ವೇಳೆ ಸಿಇಓ ಅವರು ತಿಳಿಸಿದರು. ಮಕ್ಕಳ ಆರೈಕೆಗೆ ಹಾಗೂ ಎಸ್‌ಎನ್‌ಸಿಯು ಘಟಕ್ಕೆ ಬೇಕಾಗುವ ಪರಿಕರಗಳ ಖರೀದಿಗೆ ಬೇಡಿಕೆ ಪತ್ರವನ್ನು ಕೂಡಲೇ ಸಲ್ಲಿಸುವಂತೆ ಸೂಚಿಸಿ, ತಾಯಿ ಮಕ್ಕಳ ಆರೈಕೆಯ ಸೇವೆಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಬಸವರಾಜ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ, ಹಾಗೂ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ.ಪ್ರಜ್ವಲ್ ಸೇರಿದಂತೆ ಇನ್ನಿತರ ವೈದ್ಯರು ಮತ್ತು ಸಿಬ್ಬಂದಿ ಇದ್ದರು.

# ಡಿ.14 ರಂದು ಕಾರ್ಯನಿರತ ಪತ್ರಕರ್ತರ ಸಂಘದ ನೂತನ ಪದಾಧಿಕಾರಿಗಳ ಚುನಾವಣೆ

**ಸಿರವಾರ, ಡಿ.11–** ಕಾರ್ಯನಿರತ ಪತ್ರಕರ್ತರ ಸಂಘದ ಸಿರವಾರ ತಾಲ್ಲೂಕ ಘಟಕದ 2025–2028ನೇ ಸಾಲಿನ ಅವಧಿಗೆ ನೂತನ ಪದಾಧಿಕಾರಿಗಳ ಆಯ್ಕೆಯ ಚುನಾವಣೆಯನ್ನು ಇದೇ ಡಿ.14 ಭಾನುವಾರದಂದು ಮದ್ಯಾಹ್ನ 03 ಗಂಟೆಗೆ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಏರ್ಪಡಿಸಲಾಗಿದೆ ಎಂದು ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ಗುರುನಾಥ ಅವರು ತಿಳಿಸಿದ್ದಾರೆ.



ಕಾರ್ಯನಿರತ ಪತ್ರಕರ್ತರ ರಾಜ್ಯ ಸಂಘದ ಸೂಚನೆ ಮೇರೆಗೆ ಜಿಲ್ಲೆಯ ಎಲ್ಲಾ ತಾಲ್ಲೂಕ ಘಟಕಗಳಿಗೆ ನೂತನ ಪದಾಧಿಕಾರಿಗಳ ಆಯ್ಕೆಗಾಗಿ ಚುನಾವಣೆ ಪ್ರಕ್ರಿಯೆಯನ್ನು ನಡೆಸಲಾಗುತ್ತಿದ್ದು, ಅದರಂತೆ ಸಿರವಾರ ತಾಲ್ಲೂಕು ಘಟಕಕ್ಕೆ ನೂತನ ಪದಾಧಿಕಾರಿಗಳ ಆಯ್ಕೆಗಾಗಿ ಇದೇ ಭಾನುವಾರ ಚುನಾವಣೆ ನಡೆಸಲಾಗುವುದು. ಹಾಗಾಗಿ ಅಂದು ಎಲ್ಲಾ ಪತ್ರಕರ್ತರು ಹಾಜರಿದ್ದು ಚುನಾವಣೆ ಪ್ರಕ್ರಿಯೆಯನ್ನು ಸುಸೂತ್ರವಾಗಿ ನಡೆಸಲು ಸಹಕರಿಸಬೇಕು ಎಂದು ಕೋರಿದ್ದಾರೆ.

# ಶ್ರೀನಿವಾಸ ರಾಮನುಜನ್ ಗಣಿತ ಉದ್ಯಾನ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಲಿ



**ಬೀದರ, ಡಿ.11–**3900 ಕ್ಕೂ ಹೆಚ್ಚು ಗಣಿತ ಸೂತ್ರಗಳು ರಚಿಸುವ ಮೂಲಕ ಶ್ರೀನಿವಾಸ್ ರಾಮಾನುಜನ್ ಅವರು ಜಾಗತಿಕ ಗಣಿತ ಲೋಕಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಸರಳ ಪದ್ಧತಿಯ ಮೂಲಕ ಲೆಕ್ಕ ಮಾಡುವುದನ್ನು ಕಲಿಸಿದ ರಾಮಾನುಜನ್ ಗಣಿತವನ್ನು ಸರಳೀಕರಿಸದರು. ಅವರ ಹೆಸರಿನ ಮೇಲೆ ನಿರ್ಮಿಸಲಾದ ಈ ಗಣಿತ ಉದ್ಯಾನ ವಿದ್ಯಾರ್ಥಿಗಳಿಗೆ ದೊಡ್ಡ ಪ್ರೇರಣೆಯಾಗಲಿ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ನುಡಿದರು.

ಅವರು ಬುಧವಾರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಬಗದರ್‌ನಲ್ಲಿ ಶ್ರೀನಿವಾಸ ರಾಮಾನುಜನ್ ಗಣಿತ ಉದ್ಯಾನ ಉದ್ಘಾಟಿಸಿ ಅವರು ಮಾತನಾಡಿದರು.

ಗಣಿತ ಕ್ಲೀಷ್ಟಕರವಲ್ಲ ಬದಲಾಗಿ ಅತಿ ಸರಳ ಎನ್ನುವುದನ್ನು ವಿನ್ಯಾಸಗಳ ಮೂಲಕ ಈ ಗಣಿತ ಉದ್ಯಾನ ಕಲಿಸಿಕೊಡುತ್ತದೆ. ಇದನ್ನು ಅರ್ಥೈಸಿಕೊಂಡು ಮಕ್ಕಳು ಗಣಿತ ಮತ್ತು ಇತರೆ ವಿಷಯಗಳಲ್ಲಿ ಅತಿ ಹೆಚ್ಚು ಅಂಕ ಪಡೆದು ಕೀರ್ತಿ ತರಬೇಕು. ಬಗದಲ್ ಮೊರಾರ್ಜಿ ದೇಸಾಯಿ ವಸತಿ ಶಾಲೆ ನಿರಂತರ ಶತ ಪ್ರತಿಶತ ಫಲಿತಾಂಶ ನೀಡುತ್ತಿರುವುದು ಶ್ಲಾಘನೀಯ. ಈ ವರ್ಷ 10 ರಲ್ಲಿ 3 ರ್ಯಾಂಕ್ ನೀಡಲು ಪ್ರಯತ್ನಿಸಬೇಕು ಎಂದು ಹೇಳಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ ಪಟವಾಡಿ ಮಾತನಾಡಿ, ಗಣಿತ ಅತ್ಯಂತ ಕಠಿಣ ಅನ್ನುವ ತಪ್ಪು ಕಲ್ಪನೆ ಜನಜನಿತವಾಗಿದೆ. ಗಣಿತವನ್ನು ಪ್ರೀತಿಸದರೆ ಅದರಷ್ಟು ಸರಳ ವಿಷಯ ಮತ್ತೊಂದಿಲ್ಲ. ಜೀವನದ ಸಂಕೀರ್ಣ ಸಮಸ್ಯೆ ಬಿಡಿಸುವ ಮನೋಬಲ ತುಂಬುವ ಗಣಿತವನ್ನು ಆಸಕ್ತಿಯಿಂದ ಕಲಿಯಬೇಕೆನ್ನುವ ಕಿವಿಮಾತು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಾಚಾರ್ಯ ಚೆನ್ನಬಸವ ಹೇಡೆ ಗಣಿತ ಉದ್ಯಾನದ ಮೂಲಕ ಕಠಿಣ ಪರಿಕಲ್ಪನೆ ಸರಳೀಕರಣಗೊಳಿಸುವ ಕಾರ್ಯ ಮಾಡಲಾಗಿದೆ. ಅಧ್ಯಯನದಲ್ಲಿ ಆಸಕ್ತಿ ಹೆಚ್ಚಿಸಲು ಇದು ಪೂರಕವಾಗಿದೆ. ಈ ಉದ್ಯಾನದ ಸದುಪಯೋಗ ಮಕ್ಕಳು ಪಡೆದುಕೊಂಡರೆ ಉದ್ಯಾನ ನಿರ್ಮಿಸಿದಕ್ಕೂ ಸಾರ್ಥಕವಾಗುತ್ತದೆಯೆಂದು ಹೇಳಿದರು.

ಕಾರ್ಯಕ್ರಮದಲ್ಲಿ ವಸತಿ ಶಾಲೆಯಿಂದ ವರ್ಗವಣೆ ಹೊಂದಿದ ಗಣಿತ ಶಿಕ್ಷಕಿ ನಜಿಮಾ ಪರವಿನ್ ಹಾಗೂ ಉಪ ಪ್ರಾಂಶುಪಾಲರಾಗಿ ನಿಯುಕ್ತರಾದ ಗೌತಮ ಕುದರೆ ಅವರನ್ನು ಸನ್ಮಾನಿಸಲಾಯಿತು. ಹಾಗೂ ಉದ್ಯಾನ ಲೋಕಾರ್ಪಣೆ ಪ್ರಯುಕ್ತ ವಿದ್ಯಾರ್ಥಿಗಳು ತಯ್ಯಾರಿಸಿದ 25 ಗಣಿತ ಮಾದರಿಗಳ ಪ್ರದರ್ಶನ ಮತ್ತು ವಿವರಣೆ ನಡೆಸಿಕೊಡಲಾಯಿತು.

ಈ ಸಂದರ್ಭದಲ್ಲಿ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಸಂಗೀತಾ ಬಿರಾದಾರ, ಕ್ರೈಸ್ ಜಿಲ್ಲಾ ಸಮನ್ವಯ ಅಧಿಕಾರಿ ಶರಣಪ್ಪ ಬಿರಾದಾರ ಪ್ರಾಂಶುಪಾಲ ಗೋವಿಂದ ತಾಮಗೋಳೆ, ವೀರಭದ್ರಪ್ಪ ಮಾಶೆಟ್ಟಿ, ವಿಜಯಕುಮಾರ ಅಕ್ಕಣ್ಣ, ಹಾವಪ್ಪ ಅಬ್ಬೆಂದೆ, ಪ್ರದೀಪ ನಿಡೋದೆ, ಸಿದ್ಧಲಿಂಗಯ್ಯ ಮಠಪತಿ, ಅಶೋಕ ರಾಠೋಡ, ಮಾಣೀಕ ಸಾಗರ, ಮುದಾಸ್ಸಿರ ಅಲಿ, ಶ್ರೀದೇವಿ ಸಾಲಿಮಠ, ಸವಿತಾ ಮಾಶೆಟ್ಟಿ, ವೈಭವಿ ಮಾಣೀಕ, ಶ್ರಾವಂತಿ ಅಂಬೆಸಂಗೆ, ಶಿವರಾಜ ನಳಗೀರೆ ವಸಂತ ರಾಠೋಡ ಉಪಸ್ಥಿತರಿದ್ದರು.

# ಕುಶಲಕರ್ಮಿಗಳಿಗೆ ಕಿಟ್‌ಗಳ ವಿತರಣೆ; ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ರಾಯಚೂರು,ಡಿ.11–** ಇಲ್ಲಿನ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ 2025-26ನೇ ಸಾಲಿನಲ್ಲಿ ಜಿಲ್ಲಾ ಉದ್ಯಮ ಕೇಂದ್ರ ಯೋಜನೆಯಡಿ ಜಿಲ್ಲೆಯ ಗ್ರಾಮೀಣ ಪ್ರದೇಶದ ವಿವಿಧ ವೃತ್ತಿಯಲ್ಲಿ ತೊಡಗಿರುವ ಕುಶಲಕರ್ಮಿಗಳಿಗೆ ಕಿಟ್ಸ್ ವಿತರಣೆಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಮಹಿಳೆಯರಿಗಾಗಿ ಬ್ಯೂಟಿಪಾರ್ಲರ್ ಕಿಟ್ಸ್–150, ಪುರುಷ/ ಮಹಿಳೆಯರಿಗಾಗಿ ಮೊಬೈಲ್ ರಿಪೇರಿ ಕಿಟ್ಸ್–200, ಬಿದಿರು ಬೆತ್ತದ ಉತ್ಪನ್ನಗಳ ತಯಾರಿಕೆ (ಹ್ಯಾಂಡಿ ಕ್ರಾಫ್ಟ್), ಪುರುಷ/ ಮಹಿಳೆಯರಿಗಾಗಿ ದೋಭಿ ಕಿಟ್ಸ್ –150 ಸೇರಿದಂತೆ ಒಟ್ಟು 500 ಕಿಟ್ಗಳನ್ನು ವಿತರಿಸಲಾಗುವುದು.

ದಾಖಲಾತಿಗಳು: ಜನ್ಮ ದಿನಾಂಕ ನಮೂದಿಸಿರುವ ದಾಖಲೆ (ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರ) ಕನಿಷ್ಠ 07ನೇ ತರಗತಿ ತೇರ್ಗಡೆಯಾಗಿರಬೇಕು. (ಬಿದಿರುಬೆತ್ತದ ಉತ್ಪನ್ನಗಳ ತಯಾರಿಕೆ (ಹ್ಯಾಂಡಿ ಕ್ರಾಫ್ಟ್) /ದೋಭಿ ಕಿಟ್ಗೆ ಯಾವುದೇ ಶೈಕ್ಷಣಿಕ ಅರ್ಹತೆಯ ಅವಶ್ಯಕತೆ ಇರುವುದಿಲ್ಲ.) ಜಾತಿ ಪ್ರಮಾಣ ಪತ್ರ (ಪ.ಜಾತಿ, ಪಂ.ಪಂಗಡ & ಅಲ್ಪಸಂಖ್ಯಾತರಿಗೆ ಮಾತ್ರ). ವಿಕಲಚೇತನ/ ವಿಧವೆ ಪ್ರಮಾಣ ಪತ್ರ (ವಿಕಲಚೇತನ/ ವಿಧವೆಯರಾಗಿದ್ದಲ್ಲಿ). ಚಾಲ್ತಿಯಲ್ಲಿರುವ ಪಡಿತರ ಚೀಟಿ (ಬಿ.ಪಿ.ಎಲ್./ ಅಂತ್ಯೋದಯ) ಮತ್ತು ಆಧಾರ್ ಕಾರ್ಡ್. ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರ. ವೃತ್ತಿ ದೃಢೀಕರಣ ಪತ್ರ (ಲೇಬರ್ ಕಾರ್ಡ್)/ಪಿಡಿಓ ಇವರಿಂದ ಪಡೆದ ವೃತ್ತಿ ದೃಢೀಕರಣ ಪತ್ರದೊಂದಿಗೆ ವೆಬ್‌ಸೈಟ್ ವಿಳಾಸ: https:// raichur.nic.in ನಲ್ಲಿ ಡಿಸೆಂಬರ್ 31 ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು (ಗ್ರಾಮೀಣ ಕೈಗಾರಿಕೆ) ಅವರ ಕಚೇರಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಪಂಚಾಯತ್ ಹೈದಾರಬಾದ ರಸ್ತೆ ರಾಯಚೂರು ಇವರಿಗೆ ಕಚೇರಿಯ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಉಪ ನಿರ್ದೇಶಕರು ಪ್ರಟಕಣೆಯಲ್ಲಿ ತಿಳಿಸಿದ್ದಾರೆ.

## ಮೊದಲನೇ ಪುಟದಿಂದ

# ಸಿದ್ದು ಸಿಎಂ, ಯತೀಂದ್ರ ಪುನರುಚ್ಚಾರ

ಮಾಡುತ್ತದೆ ಯಾರೂ ಯಾವುದೇ ಔತಣಕೂಟ, ಬಹಿರಂಗ ಹೇಳಿಕೆ ನೀಡಬಾರದು ಎಂದು ಹೇಳಿ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಇಬ್ಬರಿಗೂ ಉಪಹಾರ ಸಭೆ ನಡೆಸಿ ಎಲ್ಲವನ್ನು ಪರಿಹರಿಸಿಕೊಳ್ಳುಂತೆ ಸೂಚಿಸಿತ್ತು. ಅದರಂತೆ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಪರಸ್ಪರ ತಮ್ಮ ಮನೆಗಳಲ್ಲಿ ಒಂದೊಂದು ದಿನ ಉಪಹಾರ ಸಭೆಗಳನ್ನು ನಡೆಸಿ ಹೈಕಮಾಂಡ್ ತೀರ್ಮಾನಕ್ಕೆ ಬದ್ಧ ಎಂದು ಹೇಳಿ ಒಗ್ಗಟ್ಟು ಪ್ರದರ್ಶಿಸಿದ್ದರು.

ಇದಾದ ಬಳಿಕ ಅಧಿಕಾರ ಹಂಚಿಕೆಯ ಜಟಾಪಟಿಗೆ ವಿರಾಮ ಬಿದ್ದು ಹೈಕಮಾಂಡ್ ತೀರ್ಮಾನದತ್ತ ಎಲ್ಲರ ಚಿತ್ತ ನೆಟ್ಟಿತ್ತು.

ಆದರೆ ಬೆಳಗಾವಿ ಅಧಿವೇಶನ ಸಂದರ್ಭದಲ್ಲಿ ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆ ಮತ್ತೆ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಚಟುವಟಿಕೆಗಳಿಗೆ ಇಂಬು ಕೊಟ್ಟಿದೆ.

**ನಿಲ್ಲದ ಭೋಜನ ಕೂಟಗಳು**–ಬೆಂಗಳೂರಿನಲ್ಲಿ ಅಧಿಕಾರ ಹಂಚಿಕೆಯ ಜಟಾಪಟಿ ನಡೆಯುತ್ತಿರುವಾಗ ಮುಖ್ಯಮಂತ್ರಿ ಸಿದ್ದರಾಮಯ್ಯ ಆಪ್ತ ಬಳಗದಲ್ಲಿರುವ ಕೆಲ ಸಚಿವರು ಭೋಜನ ಕೂಟಗಳನ್ನು ನಡೆಸಿದ್ದರು. ಜತೆಗೆ ಡಿ.ಕೆ. ಶಿವಕುಮಾರ್ ಸಹ ಕೆಲ ಸಚಿವರನ್ನು ಭೇಟಿ ಮಾಡಿದ್ದರು.

ಈ ಭೋಜನ ಕೂಟಗಳು ಬೆಳಗಾವಿ ಅಧಿವೇಶನಕ್ಕೂ ವಿಸ್ತರಿಸಿದ್ದು, ನಿನ್ನೆ ಶಾಸಕ ಫಿರೋಜ್ ಸೇಠ್ ಮನೆಯಲ್ಲಿ ಔತಣಕೂಟ ಆಯೋಜಿಸಲಾಗಿದ್ದು ಇದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಜಮೀರ್ ಅಹಮದ್ ಖಾನ್, ಬೈರತಿ ಸುರೇಶ್, ಸಭಾಧ್ಯಕ್ಷ ಯು.ಟಿ. ಖಾದರ್, ವಿಧಾನಪರಿಷತ್ ಸದಸ್ಯ ಸಲೀಂ ಅಹಮದ್ ಭಾಗಿಯಾಗಿದ್ದರು.

ಇದು ರಾಜಕೀಯ ಔತಣ ಕೂಟವಲ್ಲ. ಫಿರೋಜ್ ಸೇಠ್ ಅವರು ಮುಖ್ಯಮಂತ್ರಿಗಳನ್ನು ಊಟಕ್ಕೆ ಕರೆದಿದ್ದರು ಅವರ ಜತೆ ಕೆಲ ಸಚಿವರು ಹೋಗಿದ್ದಾರೆ ಎಂದು ಹೇಳಲಾಗುತ್ತಿದೆ.

ಅಧಿವೇಶನದ ಸಂದರ್ಭದಲ್ಲೂ ಈ ಔತಣಕೂಟ ನಡೆದಿರುವುದು ಚರ್ಚೆಗೆ ಗ್ರಾಸವಾಗಿದೆ.

**ನಾವು ಮಾತಾಡಿದರೆ ನೋಟಿಸ್: ಇಕ್ಬಾಲ್**–ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಇಲ್ಲ ಎಂದು ವಿಧಾನಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆಗೆ ಪ್ರತಿಕ್ರಿಯಿಸಿರುವ ರಾಮನಗರ ಕಾಂಗ್ರೆಸ್ ಶಾಸಕ ಇಕ್ಬಾಲ್ ಹುಸೇನ್, ನಾವು ಏನಾದರೂ ಮಾತನಾಡಿದರೆ ನೋಟಿಸ್ ಕೊಡುತ್ತಾರೆ. ನಮ್ಮ ಹೈಕಮಾಂಡ್ ಬಲಿಷ್ಠವಾಗಿದೆ ಎಂದಿದ್ದಾರೆ. ರಾಜ್ಯದಲ್ಲಿ ಅಧಿಕಾರ ಹಂಚಿಕೆ ಸೇರಿದಂತೆ ಎಲ್ಲವನ್ನು ಹೈಕಮಾಡ್ ತೀರ್ಮಾನ ಮಾಡುತ್ತದೆ. ಯತೀಂದ್ರ ಹೇಳಿಕೆ ಹಿಂದೆ ಯಾರಿದ್ದಾರೋ ಗೊತ್ತಿಲ್ಲ. ಪದೇ ಪದೇ ಅವರು ಹೇಳಿಕೆ ನೀಡುತ್ತಿರುವ ಬಗ್ಗೆ ಅವರನ್ನೇ ಕೇಳಿ ಎಂದರು.

ನಮಗೆ ಹೇಳಿಕೆ ಕೊಡಬೇಡಿ ಎಂದಿದ್ದಾರೆ. ಹಾಗಾಗಿ ಯಾವ ಮಾತನ್ನು ಹಾಡಿಲ್ಲ. ಏನೇ ಇರಲಿ ನಾವು ಮಾತನಾಡಿದರೆ ಬಲತ್ಕಾರ, ಅವರು ಮಾತನಾಡಿದರೆ ಚಮತ್ಕಾರ ಎಂದು ಪರೋಕ್ಷವಾಗಿ ಯತೀಂದ್ರ ಹೇಳಿಕೆಗೆ ಅಸಮಾಧಾನ ವ್ಯಕ್ತಪಡಿಸಿದರು

**ಸಿಎಂ ಉತ್ತರಿಸುತ್ತಾರೆ ಡಿಕೆಶಿ**–ನಾಯಕತ್ವ ವಿಚಾರವಾಗಿ ವಿಧಾನ ಪರಿಷತ್ತು ಸದಸ್ಯ ಯತೀಂದ್ರ, ಸಿದ್ದರಾಮಯ್ಯ ನೀಡಿರುವ ಹೇಳಿಕೆ ಬಗ್ಗೆ ಮುಖ್ಯಮಂತ್ರಿಗಳೇ ಉತ್ತರ ನೀಡುತ್ತಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಬೆಳಗಾವಿಯ ಸುವರ್ಣ ಸೌಧದಲ್ಲಿಂದು 5 ವರ್ಷ ಸಿದ್ದರಾಮಯ್ಯ ಅವರೇ ಮುಂದುವರಿಯುವ ಬಗ್ಗೆ ಯತೀಂದ್ರ ನೀಡಿರುವ ಹೇಳಿಕೆ ಕುರಿತ ಸುದ್ದಿಗಾರರ ಪ್ರಶ್ನೆಗೆ ಮೇಲಿನಂತೆ ಉತ್ತರ ನೀಡಿದರು.

# ಇನ್ನೂ ಬಗೆಹರಿದಿಲ್ಲ ಇಂಡಿಗೋ ಸಮಸ್ಯೆ

ಮುಂಬೈಗಳಿಂದ 220 ವಿಮಾನಗಳನ್ನು ರದ್ದುಗೊಳಿಸಿತು, ದೆಹಲಿಯಲ್ಲಿ ಅತಿ ಹೆಚ್ಚು 137 ವಿಮಾನಗಳು ರದ್ದಾದವು. ಇಂಡಿಗೋ ಅಧ್ಯಕ್ಷ ವಿಕ್ರಮ್ ಮೆಹ್ತಾ 10 ದಿನಗಳಲ್ಲಿ ಮೊದಲ ಬಾರಿಗೆ ಬಿಕ್ಕಟ್ಟಿನ ಬಗ್ಗೆ ಮಾತನಾಡುತ್ತಾ, ಅವ್ಯವಸ್ಥೆಗೆ ಕ್ಷಮೆಯಾಚಿಸಿದರು ಮತ್ತು ಆಂತರಿಕ ಮತ್ತು ಬಾಹ್ಯ ಅನಿರೀಕ್ಷಿತ ಘಟನೆಗಳ ಸಂಯೋಜನೆಯಿಂದ ಭಾರಿ ಅಡಚಣೆಗಳು ಉಂಟಾಗಿವೆ ಎಂದು ಆರೋಪಿಸಿದರು.

ಇವುಗಳಲ್ಲಿ ಸಣ್ಣ ತಾಂತ್ರಿಕ ದೋಷಗಳು, ಚಳಿಗಾಲದ ಆರಂಭಕ್ಕೆ ಸಂಬಂಧಿಸಿದ ನಿಗದಿತ ಬದಲಾವಣೆಗಳು, ಪ್ರತಿಕೂಲ ಹವಾಮಾನ ಪರಿಸ್ಥಿತಿಗಳು, ವಾಯುಯಾನ ವ್ಯವಸ್ಥೆಯಲ್ಲಿ ಹೆಚ್ಚಿದ ದಟ್ಟಣೆ ಮತ್ತು ನವೀಕರಿಸಿದ ಸಿಬ್ಬಂದಿ ರೋಸ್ಟರಿಂಗ್ ನಿಯಮಗಳ ಅಡಿಯಲ್ಲಿ ಅನುಷ್ಠಾನಮತ್ತು ಕಾರ್ಯಾಚರಣೆ ಸೇರಿವೆ ಎಂದು ಮೆಹ್ತಾ ಹೇಳಿದರು.

ಇಲ್ಲಿ ಗಮನಿಸಬೇಕಾದ ಅಂಶವೆಂದರೆ, ಇತರ ಭಾರತೀಯ ವಿಮಾನಯಾನ ಸಂಸ್ಥೆಗಳು ಸಹ ಈ ಅನಿರೀಕ್ಷಿತ ಬಾಹ್ಯ ಘಟನೆಗಳನ್ನು ಎದುರಿಸಿದವು, ಆದರೆ ಅವುಗಳ ಕಾರ್ಯಾಚರಣೆಗಳು ಹೆಚ್ಚಾಗಿ ಪರಿಣಾಮ ಬೀರಲಿಲ್ಲ.(ಈಗ ಜಾರಿಗೆ ತರಲಾದ ಎಫ್‌ಡಿಟಿಎಲ್?) ಮಾನದಂಡಗಳ ಮೇಲಿನ ಪ್ರಸ್ತಾವಿತ ಬದಲಾವಣೆಗಳನ್ನು ಅನುಷ್ಠಾನಗೊಳಿಸುವುದರಿಂದ ಒಟ್ಟಾರೆ ಪರಿಣಾಮವು ಸಿಬ್ಬಂದಿ ಅಗತ್ಯತೆಗಳಲ್ಲಿ ಸರಿಸುಮಾರು ಶೇಕಡಾ 3 ರಷ್ಟು ಹೆಚ್ಚಳವಾಗುತ್ತದೆ ಎಂದು ಕಳೆದ ಡಿಸೆಂಬರ್‌ನಲ್ಲಿ ಡಿಜಿಸಿಎಗೆ ಬರೆದ ಪತ್ರದಲ್ಲಿ ಇಂಡಿಗೊದ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಮತ್ತು ಅಕೌಂಟೆಬಲ್ ಮ್ಯಾನೇಜರ್ ಇಸಿಡ್ರೊ ಪೋರ್ಕ್ವೆರಾಸ್? ತಿಳಿಸಿದ್ದರೂ, ಕಳೆದ ಒಂಬತ್ತು ತಿಂಗಳಲ್ಲಿ ಇಂಡಿಗೊದ ಪೈಲಟ್‌ಗಳ ಬಲವು 378 ರಷ್ಟು ಕ್ಷೀಣಿಸಿದೆ ಎಂಬುದನ್ನು ಇಲ್ಲಿ ಗಮನಿಸಬೇಕು.

# ಬಿಡಿಎ ಕಾರ್ಯಾಚರಣೆ: 140 ಕೋಟಿ ರೂ. ಆಸ್ತಿವಶ

**ಬೆಂಗಳೂರು,ಡಿ.11–** ಅಭಿವೃದ್ಧಿ ಪ್ರಾಧಿಕಾರವು ಅನಧಿಕೃತ ಕಟ್ಟಡ ನಿರ್ಮಾಣಗಳನ್ನು ತೆರವುಗೊಳಿಸುವ ಕಾರ್ಯಾಚರಣೆ ಮುಂದುವರೆಸಿದ್ದು, ಇಂದು ನಡೆದ ವಾಳಗಾಲದಲ್ಲಿ ಕಾರ್ಯಾಚರಣೆ ನಡೆಸಿ, 140 ಕೋಟಿ ರೂ. ಆಸ್ತಿಯನ್ನು ವಶಪಡಿಸಿಕೊಂಡಿದೆ.

ಬೆಂಗೂರು ಉತ್ತರ ತಾಲ್ಲೂಕು, ಯಶವಂತಪುರ ಹೋಬಳಿ, ನಾಗರಭಾವಿ ಗ್ರಾಮದ ಸರ್ವೆ ನಂ. 17 ರಲ್ಲಿ 2 ಎಕರೆ 30ಗುಂಟೆ ಪ್ರದೇಶದಲ್ಲಿ ಅನಧಿಕೃವಾಗಿ ನಿರ್ಮಾಣಗಳನ್ನು ತೆರವುಗೊಳಿಸಿ, ಸುಮಾರು 140 ಕೋಟಿ ಮೌಲ್ಯದ ಪ್ರದೇಶವನ್ನು ಪ್ರಾಧಿಕಾರವು ವಶಪಡಿಸಿಕೊಂಡಿತು.

ಈ ಕಾರ್ಯಾಚರಣೆಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕಾರ್ಯನಿರತ ಪಡೆಯ ಆರಕ್ಷಕ ಅಧೀಕ್ಷಕರು, ಅಭಿಯಂತರ ಅಧಿಕಾರಿ-1, ಪಶ್ಚಿಮ ವಿಭಾಗದ ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರೊಂದಿಗೆ ಕಾರ್ಯಾಚರಣೆ ನಡೆಸಲಾಯಿತು.




# ಫಲಿತಾಂಶ ಸುಧಾರಣೆಗೆ ಪ್ರಯತ್ನ ಮಾಡೋಣ:ಪಂಡಿತರಾವ ಪವ್ಹಾರ

**ಸೈದಾಪುರ:ಡಿ.11–**ಜಿಲ್ಲೆಯ ಫಲಿತಾಂಶ ಸುಧಾರಣೆಗೆ ನಾವೆಲ್ಲರೂ ಪ್ರಯತ್ನ ಮಾಡೋಣ ಇದಕ್ಕಾಗಿ ಯೋಜನೆಯನ್ನು ರೂಪಿಸಿಕೊಂಡು ಕಾರ್ಯನಿರ್ವಹಿಸಿ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಉಪನಿರ್ದೇಕರಾದ ಪಂಡಿತರಾವ ಪವ್ಹಾರ ಅಭಿಪ್ರಾಯಪಟ್ಟರು.ಪಟ್ಟಣದ ಮಲ್ಹಾರ ಕಾರೆಡ್ಡಿ ಬಸವಂತರಾಯ ಮತ್ತು ಸಿದ್ದಪ್ಪ ಸ್ಮಾರಕ ವಿದ್ಯಾ ವರ್ಧಕ ಕಲಾ ಪದವಿ ಪೂರ್ವ ಕಾಲೇಜಿಗೆ ಭೇಟಿ ನೀಡಿ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳೊಂದಿಗೆ ಸಂವಾದ ಮಾಡಿ ಮಾತನಾ ಡಿದರು. ಶಿಕ್ಷಣ ಇಲಾಖೆ ಇಗಾಗಲೇ ವಿಷಯವಾರು ನೀಲ ನಕ್ಷೆ ಸೇರಿದಂತೆ ವಿವಿಧ ಅನುಕೂಲತೆಗಳನ್ನು ಕಲ್ಪಿಸಿದೆ. ಇದರ ಸರಿಯಾದ ಸದುಪಯೋಗ ಪಡೆದುಕೊಂಡು ಶೈಕ್ಷಣಿಕ ಅಭಿವೃ ದ್ಧಿಗಾಗಿ ಪ್ರಯತ್ನ ಮಾಡಬೇಕಾಗಿದೆ. ಕಾಲೇಜಿಗೆ ಭೇಟಿ ನೀಡಿದಾಗ ವಿದ್ಯಾರ್ಥಿಗಳ ದಾಖಲಾತಿ ಉತ್ತಮವಾಗಿದ್ದೂ ಇನ್ನೂ ಹೆಚ್ಚಿನ ಶೈಕ್ಷಣಿಕ ಸಾಧನೆ ನಿಮ್ಮದಾಗಲಿ ಎಂದು ಹಾರೈಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸಿಬ್ಬಂದಿ ಮನುಪಾಟೀಲ, ಪ್ರಾಂಶುಪಾಲ ಜಿ.ಎಂ.ಗುರುಪ್ರಸಾದ, ಹಂಪಣ್ಣ ಸಜ್ಜನಶೆಟ್ಟಿ, ದೇವಿಂದ್ರ ಪೀರಾ, ಚಂದ್ರಶೇಖರ ಡೊಣ್ಣೆಗೌಡ, ಬಸವರಾಜ ಭರಮಶೆಟ್ಟಿ, ಶಾಂತಲಾ.ಎನ್, ಇಂದಿರಾ ತೂರೆ, ರಾಜಶೇಖರ ಪಾಟೀಲ, ಅನುರಾಧ ಸೇರಿದಂತೆ ಇತರರಿದ್ದರು.

# ಸಿಯುಕೆಯಲ್ಲಿ ಅಂತರರಾಷ್ಟ್ರೀಯ ಮಾನವ ಹಕ್ಕುಗಳ ದಿನ ಆಚರಣೆ

**ಕಲಬುರಗಿ,ಡಿ.11–** ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕಾನೂನು ವಿಭಾಗವು ಅಳಂದ ತಾಲೂಕು ಕಾನೂನು ಸೇವೆಗಳ ಸಮಿತಿ, ಮತ್ತು ಅಳಂದ ವಕೀಲರ ಸಂಘದ ಸಹಯೋಗದೊಂದಿಗೆ ಅಂತರರಾಷ್ಟ್ರೀಯ ಮಾನವ ಹಕ್ಕುಗಳ ದಿನವನ್ನು ಆಚರಿಸಿತು.

ಮುಖ್ಯ ಅತಿಥಿಯಾಗಿ ಸಭೆಯನ್ನುದ್ದೇಶಿಸಿ ಮಾತನಾಡಿದ ಅಳಂದ ಜೆಎಂಎಸಿ ನ್ಯಾಯಾಧೀಶರಾದ ಸುಮನ್ ಚಿತ್ತರಗಿ ಅವರು ಮಾನವ ಹಕ್ಕುಗಳು ಮೂಲಭೂತವಾಗಿ ಅತ್ಯಗತ್ಯ. ಅವು ನಮಗೆ ಸಮಾಜದಲ್ಲಿ ಸಮಾನತೆ ಮತ್ತು ನ್ಯಾಯಯುತವಾಗಿ ಬದುಕಲು ಅವಕಾಶ ನೀಡುತ್ತವೆ. ಪ್ರತಿಯೊಬ್ಬರೂ ಘನತೆ ಮತ್ತು ಗೌರವಕ್ಕೆ ಅರ್ಹರು. ಮಾನವ ಹಕ್ಕುಗಳು ಪ್ರತಿಯೊಬ್ಬ ಮನುಷ್ಯನ ಜೀವನವನ್ನು ಉನ್ನತೀಕರಿಸುತ್ತವೆ" ಎಂದು ಹೇಳಿದರು.

ಕುಲಪತಿ ಪ್ರೋ. ಬಟ್ಟು ಸತ್ಯನಾರಾಯಣ ಅವರು ಮಾತನಾಡಿ, "ನ್ಯಾಯಾಂಗವು ಮಾನವ ಹಕ್ಕುಗಳನ್ನು ರಕ್ಷಿಸುತ್ತದೆ. ಪ್ರತಿಯೊಬ್ಬರೂ ಘನತೆಯಿಂದ ಬದುಕಬೇಕು. ನಮ್ಮ ಹಕ್ಕುಗಳು ಮತ್ತು ಕರ್ತವ್ಯಗಳನ್ನು ತಿಳಿದುಕೊಳ್ಳುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ. ಕಾನೂನು ನಮ್ಮನ್ನು ರಕ್ಷಿಸುತ್ತದೆ ಮತ್ತು ನಾವು ಕಾನೂನನ್ನು ಗೌರವಿಸಬೇಕು. ನಮ್ಮ ಸಮಾಜದಲ್ಲಿನ ತಾರತಮ್ಯವನ್ನು ನಿರಾಕರಿಸಲು ನಾವು ಶಿಕ್ಷಣದ ಹಕ್ಕನ್ನು ಅರ್ಥಮಾಡಿಕೊಳ್ಳಬೇಕು" ಎಂದು ಹೇಳಿದರು.

ಮುಖ್ಯ ಭಾಷಣಕಾರ ಅಳಂದ ವಕೀಲರಾದ ಎಂ ವಿ ಎಕ್ಬೋಟೆ ಅವರು ಮಾತನಾಡಿ, ಎಲ್ಲಾ ರಾಷ್ಟ್ರಗಳು ಮಾನವ ಹಕ್ಕುಗಳನ್ನು ಅಪರೂಪವಾಗಿ ಘೋಷಿಸುತ್ತವೆ. ಪ್ರಪಂಚದಾದ್ಯಂತ ಮಾನವ ಹಕ್ಕುಗಳನ್ನು ಗುರುತಿಸಲಾಗಿದೆ. ನಮ್ಮ ಸಂವಿಧಾನದ ಪೀಠಿಕೆಯಲ್ಲಿಯೇ ನಮಗೆ ಮಾನವ ಹಕ್ಕುಗಳಿವೆ. ಮಾನವ ಹಕ್ಕುಗಳು ಸಂವಿಧಾನದಿಂದ ರಕ್ಷಿಸಲ್ಪಟ್ಟಿವೆ. ಮಾನವ ಹಕ್ಕುಗಳ ಉಲ್ಲಂಘನೆಯನ್ನು ಪ್ರಶ್ನಿಸುವ ಎಲ್ಲ ಹಕ್ಕು ನಮಗಿದೆ. ಎಲ್ಲಾ ಮಾನವರು ಸ್ವತಂತ್ರವಾಗಿ ಮತ್ತು ಘನತೆ ಮತ್ತು ಗೌರವದಲ್ಲಿ ಸಮಾನವಾಗಿ ಜನಿಸುತ್ತಾರೆ. ಸಂವಿಧಾನವು ಯಾವುದೇ ತಾರತಮ್ಯವಿಲ್ಲದೆ ಮಾನವ ಹಕ್ಕುಗಳನ್ನು ರಕ್ಷಿಸುತ್ತದೆ. ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅಳಂದ್ ಬಾರ್ ಅಸೋಸಿಯೇಷನ್ ಅಧ್ಯಕ್ಷ ಕಮಲಾಕರ್ ರಾಥೋಡ್, ಅಳಂದನ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿಯ ಸಹಾಯಕ ಸಾರ್ವಜನಿಕ ಅಭಿಯೋಜಕ ಇಸ್ಮಾಯಿಲ್ ಪಟೇಲ್, ಅಳಂದನ ಸಹಾಯಕ ಸಾರ್ವಜನಿಕ ಅಭಿಯೋಜಕ ಜ್ಯೋತಿ ಬಂಡಿ, ಅಳಂದನ ಸಹಾಯಕ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿಯ ಸಹಾಯಕ ಸಾರ್ವಜನಿಕ ಅಭಿಯೋಜಕ ಬಲಭೀಮ್ ಸಿಂಧೆ, ಮುಖ್ಯ ಗ್ರಂಥಪಾಲಕ ಡಾ. ಕಟ್ಟಿಮನಿ, ಪ್ರೋ. ಪ್ರೋ. ಪಾಂಡುರಂಗ, ಡಾ. ರಾಜಶ್ರೀ, ಡಾ. ಅಂಕುಶ್, ಡಾ. ಪಂಡಿತ್, ಡೀನ್‌ಗಳು, ಮುಖ್ಯಸ್ಥರು, ಸಂಶೋಧನಾರ್ಥಿಗಳು, ವಿದ್ಯಾರ್ಥಿಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು. ಕಾನೂನು ಅಧ್ಯಯನ ಶಾಲೆಯ ಡೀನ್ ಡಾ. ಕುಬಕಡ್ಡಿ ಸ್ವಾಗತಿಸಿದರು. ಡಾ. ಅನಂತ್ ಚಿಂಚೋರ್ ಧನ್ಯವಾದ ಅರ್ಪಿಸಿದರು. ಸಂಗೀತ ವಿಭಾಗದ ವಿದ್ಯಾರ್ಥಿ ವಂದೇ ಮಾತರಂ ಮತ್ತು ರಾಷ್ಟ್ರಗೀತೆ ಹಾಡಿದರು. ಕೃಷ್ಣ ಶೇಖರ್ ಶರ್ಮಾ ಕಾರ್ಯಕ್ರಮವನ್ನು ನಿರೂಪಿಸಿದರು.



# ಸ್ಕೂಲ್ ಚಂದನಕ್ಕೆ ಡಿ.13 ರಂದು ಸಿಎಂ ಸಿದ್ದರಾಮಯ್ಯ



**ಲಕ್ಷ್ಮೇಶ್ವರ. ಡಿ.11**–ಪಟ್ಟಣದ ಪ್ರತಿಷ್ಠಿತ ಶಾಲೆ ಸಿಬಿಎಸ್‌ಇ ಸ್ಕೂಲ್ ಚಂದನಕ್ಕೆ ಡಿ.13 ರಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬೆಳಗ್ಗೆ 11 ಗಂಟೆಗೆ ಹೆಲಿಕ್ಯಾಪ್ಟರ್ ಮೂಲಕ ಆಗಮಿಸಲಿದ್ದಾರೆ ಎಂದು ರೋಣ ತಾಲೂಕಿನ ಶಾಸಕಗದಗಜಿಲ್ಲಾಕಾಂಗೇಸ್ಸ ಅಧ್ಯಕ್ಷ ಜಿ.ಎಸ್.ಪಾಟೀಲ್ ಹೇಳಿದರು.

ಅವರು ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಸಭಾ ಭವನದಲ್ಲಿ ಕರೆಯಲಾದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿ ಮಾತನಾಡಿದರು.

ಭಾರತ ರತ್ನ ಪ್ರೋ ಸಿಎನ್ ಆರ್ ರಾವರವರ 10 ನೇ ವರ್ಷದ ವಿಜ್ಞಾನ ವಿಸ್ತೃತ ಕಾರ್ಯಕ್ರಮ ಉದ್ಘಾಟನೆ ಮತ್ತು 2025 ನೇ ಸಾಲಿನ ಚಂದನಶ್ರೀ ಪ್ರಶಸ್ತಿಯನ್ನು ಬಿ.ಎಸ್ ಪಾಟೀಲ್ ನಿವೃತ್ತ ಐಎಎಸ್ ಅಧಿಕಾರಿ ಹಿಂದಿನ ಮುಖ್ಯಕಾರ್ಯದರ್ಶಿಗಳು ಕರ್ನಾಟಕ ಸರಕಾರ ಹಾಗೂ ಗ್ರೇಟರ್ ಬೆಂಗಳೂರು ರೂವಾರಿ ಇವರಿಗೆ ನೀಡಲಾಗುತ್ತಿದೆ ಹಾಗೂ ಸ್ಕೂಲ್ ಚಂದನ ಗೌರವ ನಿರ್ದೇಶಕರಾಗಿ ನಿವೃತ್ತಿರಾದ 22 ವರ್ಷ ಒಂದು ದಿನ ರಜೆ ಮಾಡದೆ ಶಿಕ್ಷಕರಾಗಿ ಸೇವೆ ಸಲ್ಲಿಸಿದ ದಿ.ಹೆಚ್.ಸಿ.ರಟಗೇರಿಯವರ ಕಂಚಿನ ಮೂರ್ತಿ ಅನಾವರಣವನ್ನು ಸಿಎಂ ಸಿದ್ದರಾಮಯ್ಯನವರು ಮಾಡುವವರು ಎಂದು ತಿಳಿಸಿದರು.

ನಂತರ ಸ್ಕೂಲ್ ಚಂದನದ ಸಂಸ್ಥಾಪ ಟಿ.ಈಶ್ವರ ಮಾತನಾಡಿ ಪ್ರತಿ ವರ್ಷದಂತೆ ಈ ವರ್ಷವು ಡಿಸೆಂಬರ್ 13.14.15 ರಂದು ಮೂರು ದಿನಗಳ ಭಾರತ ರತ್ನ ಪ್ರೋ ಸಿ.ಎನ್.ಆರ್ ರಾವರವರ ವಿಜ್ಞಾನ ವಿಸ್ತೃತ ಕಾರ್ಯಕ್ರಮ ರಾಷ್ಟ್ರ ಅಂತರಾಷ್ಟ್ರೀಯ ಪ್ರಖ್ಯಾತ ವಿಜ್ಞಾನಿಗಳು ಕಾನೂನು ಸಂಸದಿಯ ವ್ಯವಹಾರಗಳ ಮತ್ತು ಪ್ರವಾಸೋದ್ಯಮ ಸಚಿವರಾದ ಹೆಚ್.ಕೆ.ಪಾಟೀಲ್ ಸಂಸದರುಹಾಗು ಕೇಂದ್ರ ಮಾಜಿ ಸಚಿವರಾದ ಜೈರಾಮ ರಮೇಶ ಬರಲಿದ್ದಾರೆ ವಿಸ್ತೃತ ಕಾರ್ಯಕ್ರಮದಲ್ಲಿ ಬೆಂಗಳೂರಿನ ಜೆಎನಸಿಎಎಸ್ ಆರ್ ಐಎಸಸಿ ಐಐಟಿ ಐಐಎಸ್ ಜೆಎಂಪಿ ಬೆಂಗಳೂರು ಧಾರವಾಡ ಸೇರಿದಂತೆ ವಿಜ್ಞಾನಿಗಳು ವಿಜ್ಞಾನ ವಿಸ್ತೃತ ಕಾರ್ಯಕ್ರಮದಲ್ಲಿ ಭಾಗವಹಿಸಿ ಯುವ ವಿಜ್ಞಾನಿಗಳಿಗೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಲಿದ್ದಾರೆ ಎಂದು ಹೇಳಿದರು

ಕಾರ್ಯಕ್ರಮಕ್ಕೆ ಸಮಾರು 15 ರಿಂದ 20 ಸಾವಿರ ಜನ ಸೇರುವ ನಿರೀಕ್ಷೆಇದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಡಿ.ಆರ್ ಪಾಟೀಲ್ ಬಿ ಆರ್ ಯಾವಗಲ್ಲ ಜಿ.ಎಸ್.ಗಡ್ಡದೇವರಮಠ ರಾಮಕೃಷ್ಣ ದೊಡ್ಡಮನಿ ರಾಮಣ್ಣ ಲಮಾಣಿ ಹುಮಾಯೂನ್ ಮಾಗಡಿ ಆನಂದ ಸ್ವಾಮಿ ಗಡ್ಡದೇವರಮಠ ಜಿ.ಆರ್.ಕೊಪ್ಪದಜಿ.ವಿ.ಪಾಟೀಲ್ ನಾಗರಾಜ ಮಡಿವಾಳರ ಚನ್ನಪ್ಪ ಜಗಲಿ ಸೋಮಣ್ಣ ಬೆಟಗೇರಿ ವೀರೇಂದ್ರಗೌಡ ಪಾಟೀಲ್ ದಾದಾಪೀರ ಮುಚಾಲೆ ಐಎಸ್ ಪಾಟೀಲ್ ವೀರಯ್ಯ ಮಠಪತಿ ಅಶೋಟಿ ಮಕಾಂದಾರ ಭಾಗ್ಯಶ್ರೀ ಬಾಬಣ್ಣ ಕಿರಣ ನವಲೆ ಅಂಬರೀಶತೆಂಬದಮನಿ ಈರಣ್ಣ ಅಂಗಡಿ ಸೇರಿದಂತೆ ಮುಂಡರಗಿ ಗದಗ ರೋಣ ನರಗುಂದ ಗಜೇಂದ್ರಗಡ ತಾಲೂಕುಗಳ ಬ್ಲಾಕ್ಮಟ್ಟದ ಅಧ್ಯಕ್ಷರು ಉಪಸ್ಥಿತರಿದ್ದರು.

## ಪ್ರಧಾನಿ ವಿರುದ್ಧ ಅವಹೇಳನಕಾರಿ ವೀಡಿಯೋ ಮಾಡಿದವರ ವಿರುದ್ಧ ಕಠಿಣ ಕ್ರಮಕ್ಕೆ ಯದುವೀರ್ ಆಗ್ರಹ



**ಮೈಸೂರು,ಡಿ.11**– ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಕುರಿತ ಅವಹೇಳನಕಾರಿ ವೀಡಿಯೋ ಮಾಡಿದವರ ವಿರುದ್ಧ ಪೊಲೀಸರು ಕಠಿಣ ಕ್ರಮ ತೆಗೆದುಕೊಳ್ಳಬೇಕು ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಸೂಚನೆ ನೀಡಿದ್ದಾರೆ.

ಸಾಮಾಜಿಕ ಜಾಲತಾಣಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ನಿಂದಿಸುವ ವೀಡಿಯೋಗಳನ್ನು ಹರಿಯಬಿಟ್ಟಿರುವ ಫಾಹಾದ್, ಬಾಸಿಲ್, ಸಮೀರ್‌ರನ್ನು ಪೊಲೀಸರು ಬಂಧಿಸಿದ್ದಾರೆ. ಇಷ್ಟು ಮಾತ್ರ ಸಾಲದು, ಇವರಿಗೆ ಕಠಿಣ ಶಿಕ್ಷೆ ಕೊಡಿಸಬೇಕು ಎಂದು ಯದುವೀರ್ ಆಗ್ರಹಿಸಿದರು.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಸಂಸದರು, ಇಂಥವರ ಸಂಖ್ಯೆ ಇತ್ತೀಚೆಗೆ ಹೆಚ್ಚಾಗುತ್ತಿದ್ದು, ತಕ್ಕ ಪಾಠ ಕಲಿಸಬೇಕಾದ ಅಗತ್ಯವಿದೆ. ಈ ನಿಟ್ಟಿನಲ್ಲಿ ಈಗ ಬಂಧಿತರಾಗಿರುವವರಿಗೆ ಕಠಿಣ ಕಾನೂನು ಕ್ರಮ ಜರುಗಿಸಬೇಕಾದ ಅಗತ್ಯವಿದೆ ಎಂದರು.

**ಪೊಲೀಸ್ ಅಧಿಕಾರಿಗಳೊಂದಿಗೆ ಚರ್ಚೆ :**

ಈ ಕಿಡಿಗೇಡಿಗಳಿಗೆ ಕಠಿಣ ಶಿಕ್ಷೆ ಜಾರಿಯಾದರೆ ಮುಂದೆ ಇಂಥ ಅಪರಾಧ ಎಸಗಲು ಭೀತಿ ಉಂಟಾಗಬೇಕು. ಈ ಸಂಬಂಧ ಪೊಲೀಸ್ ಅಧಿಕಾರಿಗಳೊಂದಿಗೆ ಈಗಾಗಲೇ ಮಾತನಾಡಿದ್ದು, ಕಠಿಣ ಕ್ರಮ ಜರುಗಿಸಬೇಕು ಎಂದು ಸೂಚನೆ ನೀಡಿದ್ದೇನೆ ಎಂದು ವಿವರಿಸಿದರು.ದೇಶದ ಪ್ರಧಾನಮಂತ್ರಿಯನ್ನು ನಿಂದಿಸಿರುವವರಿಗೆ ಕಠಿಣ ಶಿಕ್ಷೆ ಜಾರಿಯಾಗಬೇಕು ಎಂದು ಆಗ್ರಹಿಸಿದ ನಾಳೆಯಿಂದ ಬಿಜೆಪಿ ವತಿಯಿಂದ ಪ್ರತಿಭಟನೆ ಕೈಗೊಳ್ಳಲಾಗುವುದು ಎಂದು ಸಂಸದ ಯದುವೀರ್ ಒಡೆಯರ್ ಮಾಹಿತಿ ನೀಡಿದರು.

# ಫಲಾನುಭವಿಗಳನ್ನು ಗುರುತಿಸಿ, ಯೋಜನೆ ತಲುಪಿಸಿ

**ಗದಗ, ಡಿ.11**– ರಾಜ್ಯದ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಗದಗ ತಾಲೂಕು ಅಗ್ರಸ್ಥಾನ ಪಡೆದಿದ್ದರೂ, ಗೃಹಲಕ್ಷ್ಮಿಯ ಯೋಜನೆಯ ಪ್ರಗತಿ ಇನ್ನೂ ಹೆಚ್ಚಿಸಬೇಕಿದೆ ಎಂಬುದಾಗಿ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಹೇಳಿದರು.

ಉಪ ವಿಭಾಗಾಧಿಕಾರಿಗಳ ಕಾರ್ಯಾಲಯದಲ್ಲಿ ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ತಾಲೂಕು ಸಮಿತಿ ಕಚೇರಿಯಲ್ಲಿ ನಡೆದ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ನಂತರ ಮಾತನಾಡಿ "ಯೋಜನೆಯ ಶೇಕಡಾ 100 ಪ್ರಗತಿ ಸಾಧನೆಗೆ ಎಲ್ಲ ಅಂಗನವಾಡಿ ಕಾರ್ಯಕರ್ತೆಯರ ಪಾತ್ರ ಮಹತ್ವವಾಗಿದೆ ಎಂದರು, ಪ್ರತಿ ವಾರ್ಡಗಳಲ್ಲಿ ನಗರಸಭೆಯ ಸದಸ್ಯರು, ಅಧಿಕಾರಿಗಳು, ಮತ್ತು ಸಮಿತಿ ಸದಸ್ಯರ, ಸಹಕಾರ 'ದೊಂದಿಗೆ ನಗರದ 1 ರಿಂದ 35 ವಾಡಗಳಲ್ಲಿ ಯೋಜನೆಯ ಸೌಲಭ್ಯದಿಂದ ಯಾರೂ ವಂಚಿತರಾಗಬಾರದು" ಮತ್ತು ವಂಚಿತರಾದವರನ್ನು ಗುರುತಿಸಿ ಮಾಹಿತಿ ಕೊಡಲು ಅಂಗನವಾಡಿ ಕಾರ್ಯಕರ್ತೆಯರಿಗೆ ಸೂಚಿಸಿದರು.

ರಾಜ್ಯದಲ್ಲಿಯೇ ಗ್ಯಾರಂಟಿ ಯೋಜನೆಗಳ ಅನುಷ್ಟಾನದಲ್ಲಿ ಗದಗ ತಾಲೂಕು ಅಗ್ರಸ್ಥಾನ ಪಡೆದಿದ್ದು ಇದಕ್ಕೆ ಕಾರಣೀಕರ್ತರಾದ ರಾಜ್ಯ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಎಚ್.ಎಂ.ರೇವಣ್ಣ, ಉಪಾಧ್ಯಕ್ಷ ಎಸ್.ಆರ್.ಪಾಟೀಲ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಮಾರ್ಗದರ್ಶದಲ್ಲಿ ಪ್ರಗತಿ ಸಾಧಿಸಿದ್ದು ಅಭಿನಂದನಾರ್ಹವಾಗಿದೆ ಎಂದರು.

ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ತಾಲೂಕು ಸಮಿತಿ ಸದಸ್ಯರಾದ ಕೃಷ್ಣಗೌಡ ಪಾಟೀಲ ಇವರು ಮಾತನಾಡಿ ಪಂಚಗ್ಯಾರಂಟಿ ಯೋಜನೆಗಳು ಬಡಜನರನ್ನು ಆರ್ಥಿಕವಾಗಿ ಸಬಲೀಕರಿಸುವ ಉದ್ದೇಶ ಹೊಂದಿವೆ ಅರ್ಹ ಫಲಾನುಭವಿಗಳು ಸೌಲಭ್ಯ ಪಡೆಯುವಲ್ಲಿ ವಿಳಂಬ ಆಗಬಾರದು ಪ್ರತಿ ವಾರ್ಡಗಳಿಗೆ ಅಂಗನವಾಡಿ ಕಾರ್ಯಕರ್ತೆಯರು ಬೇಟಿ ನೀಡಿ ಎಂದರು.

"ಗ್ಯಾರಂಟಿ ಯೋಜನೆ ಅನುಷ್ಠಾನದಲ್ಲಿ ಶೇಕಡಾ 100 ಪ್ರಗತಿ ಸಾಧಿಸಲು ಎಲ್ಲ ಅಂಗನವಾಡಿ ಕಾರ್ಯಕರ್ತೆಯರು ಕಾರ್ಯನಿರ್ವಹಿಸಬೇಕು" ಹಾಗೂ ಪ್ರತಿ ವಾರ್ಡಗಳಲ್ಲಿ ಕ್ಯಾಂಪೇನ್ ಮಾಡುವ ಮೂಲಕ ಸೌಲಬ್ಯ ವಂಚಿತರನ್ನು ಮತ್ತು ಅರ್ಹ ಫಲಾನುಭವಿಗಳನ್ನು ಗುರುತಿಸಿ ಸೌಲಭ್ಯ ಒದಗಿಸಲು ಮುಂದಾಗಬೇಕೆಂದರು.ಅರ್ಹರಿಗೆ ಸೌಲಭ್ಯ ತಲುಪಿಸುವುದು ಗೃಹಲಕ್ಷ್ಮಿ ಯೋಜನೆಯಡಿ ಜುಲೈ 2025 ರವರೆಗೆ ಗದಗ ತಾಲೂಕಿನಲ್ಲಿ ಯಜಮಾನಿ ಹೆಸರಿನಲ್ಲಿ ಒಟ್ಟು 82193 ಜನರು ಪಡಿತರ ಹೊಂದಿರುತ್ತಾರೆ. 81967 ಅರ್ಜಿಗಳು ನೊಂದಣಿಯಾಗಿದ್ದು ಅದರಲ್ಲಿ 78986 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ. ಶೇ



96.36 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ಸಂಬಂಧಿತ ಅಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು, ಉಪಸ್ಥಿತರಿದ್ದರು.

# ಸಾರಿಗೆ ಇಲಾಖೆ ಅಕ್ರಮ: ತನಿಖೆ ಸಚಿವರ ಭರವಸೆ

**ಬೆಳಗಾವಿ, ಡಿ.11:**– ಸಾರಿಗೆ ಇಲಾಖೆಯಲ್ಲಿ ಸಾರಿಗೆ ವಾಹನ ತಪಾಸಣೆಯ ಇನ್ಸ್‌ಪೆಕ್ಟರ್ ಹುದ್ದೆಗೆ ಬಡ್ತಿ ಪಡೆಯಲು ಸುಮಾರು 50 ಗ್ರೂಪ್ ಸಿ ಲಿಪಿಕ ಸಿಬ್ಬಂದಿ ತಾಂತ್ರಿಕ ಶಿಕ್ಷಣದ ನಕಲಿ ಸೇವಾನುಭವ ಪ್ರಮಾಣಪತ್ರ ನೀಡಿ, ಸಂಜೆ ಪಾಲಿಟೆಕ್ನಿಕ್ ಕಾಲೇಜ್‌ನಲ್ಲಿ ಓದುತ್ತಿರುವ ಆರೋಪವಿದ್ದು, ಈ ಸಂಬಂಧ ಎಸ್‌ಐಟಿ ರಚಿಸಿ ತನಿಖೆ ನಡೆಸಬೇಕು ಎಂದು ವಿಧಾನ ಪರಿಷತ್ ಶಾಸಕ ಟಿ.ಎ.ಶರವಣ ಒತ್ತಾಯಿಸಿದರು.

ಸಾರಿಗೆ ಅಕ್ರಮದ ಕುರಿತು ಅವರು ಕೇಳಿದ ಚುಕ್ಕೆ ಗುರುತಿನ ಪ್ರಶ್ನೆಗೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಬುಧವಾರ ಉತ್ತರ ನೀಡಿದರು. ಸಾರಿಗೆ ಇಲಾಖೆಯ ಲಿಪಿಕ ಸಿಬ್ಬಂದಿ ಕಾನೂನು ಬಾಹಿರವಾಗಿ ನಕಲಿ ಸೇವಾನುಭವ ಪ್ರಮಾಣ ಪತ್ರ ಪಡೆದಿರುವುದು ಇನ್ನೂ ತನಿಖೆಯ ಹಂತದಲ್ಲಿದೆ. ಶೀಘ್ರದಲ್ಲಿ ಋಜುವಾತಾದಲ್ಲಿ ತಪ್ಪಿತಸ್ಥರ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಸಾರಿಗೆ ಇಲಾಖೆ ಭಡ್ತಿ ಹಿಂದೆ ಕೋಟ್ಯಂತರ ರೂಪಾಯಿ ಅಕ್ರಮ ನಡೆದಿರುವ ಅನುಮಾನವಿದೆ. ಇಲಾಖೆಯ ನೇಮಕಾತಿ ಹಾಗೂ



ಬಡ್ತಿ ನಿಯಮಾವಳಿಯೇ ದೋಷಪೂರಿತವಾಗಿದೆ. ಇದರ ಹಿಂದೆ ವ್ಯವಸ್ಥಿತ ಜಾಲವೇ ಇದ್ದು, ಸರ್ಕಾರ ತಕ್ಷಣ ಎಸ್‌ಐಟಿ ರಚನೆ ಮಾಡಿ, ಶಿಕ್ಷಣ ಸಂಸ್ಥೆ ಮೇಲೆ ದಾಳಿ ಮಾಡಬೇಕು. ವ್ಯಾಸಂಗ ಮಾಡುತ್ತಿರುವ ಇಲಾಖಾ ಸಿಬ್ಬಂದಿಯ ದಾಖಲೆಗಳನ್ನು ವಶಪಡಿಸಿಕೊಂಡು ತನಿಖೆ ನಡೆಸಬೇಕು. ವಂಚನೆ ಮಾಡಿರುವ ಅಭ್ಯರ್ಥಿಗಳನ್ನು ಬಂಧಿಸಬೇಕು. ಕ್ರಿಮಿನಲ್ ಮೊಕದ್ದಮೆ ದಾಖಲು ಮಾಡಬೇಕು ಎಂದು ಆಗ್ರಹಿಸಿದರು.

ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದರೆ ಸಾಕು, ಇನ್ಸ್‌ಪೆಕ್ಟರ್ ಆಫ್ ಮೋಟಾರ್ ವೆಹಿಕಲ್ ಹುದ್ದೆಯನ್ನು ಪಡೆಯಬಹುದು ಎಂದು ಕಾಯ್ದೆಗೆ ತಿದ್ದುಪಡಿ ತರಲಾಗಿದ್ದು, ಅದೇ ಅಕ್ರಮವಾಗಿದೆ. ಇಲಾಖೆಯಲ್ಲಿ ಇರುವ ಸಿಬ್ಬಂದಿಗೆ ಬಡ್ತಿಯಲ್ಲಿ ಮೀಸಲಾತಿ ಕೊಡಬೇಕು ಎನ್ನುವ ನೆಪದಲ್ಲಿ ಶೇಕಡಾ 5ರಷ್ಟು ಮೀಸಲಾತಿ ನೀಡಿ ಕಾಯ್ದೆಗೆ ತಿದ್ದುಪಡಿ ತರಲಾಗಿದೆ. ಮೂಲತಃ ಈ ತಿದ್ದುಪಡಿಯೇ ದೋಷಪೂರಿತವಾಗಿದೆ. ಇಂಥ ಉನ್ನತ ಹುದ್ದೆಗಳಿಗೆ ಇಲಾಖಾವಾರು ಬಡ್ತಿ ನೀಡಬೇಕಾದರೆ ತಾಂತ್ರಿಕ ಶಿಕ್ಷಣದ ಅಗತ್ಯವಿದೆ. ಎಸ್‌ಎಸ್‌ಎಲ್‌ಸಿ ಪಾಸ್ ಮಾಡಿಕೊಂಡು ಇಲಾಖೆಯಲ್ಲಿ ಚಾಲಕ, ಪ್ರಥಮ ದರ್ಜೆ ಸಹಾಯಕ(ಎನ್‌ಡಿಎ) ಆದವರು ಇನ್ಸ್‌ಪೆಕ್ಟರ್ ಆಫ್ ಮೋಟಾರ್ ವೆಹಿಕಲ್ ಹುದ್ದೆಗೇರಲು ಹೇಗೆ ಸಾಧ್ಯವಿದೆ ಎಂದು ಶರವಣ ಅವರು ಪ್ರಶ್ನಿಸಿದರು. ಹಾಗಾಗಿ ಸರ್ಕಾರದ ನೇಮಕಾತಿಯೇ ದೋಷಪೂರಿತವಾಗಿ ಆಗಿದೆ. ಇದರಿಂದ ಹಿಂದೆ ದೊಡ್ಡ ಜಾಲವೇ ಕಾರ್ಯ ನಿರ್ವಹಿಸುತ್ತಿದೆ ಎಂದು ಸಾರಿಗೆ ಇಲಾಖೆಯಲ್ಲಿ ನಡೆಯುತ್ತಿರುವ ಅಕ್ರಮವನ್ನು ಶರವಣ ಅವರು ಎಳೆ ಎಳೆಯಾಗಿ ಬಿಚ್ಚಿಟ್ಟರು.

## ಪ್ರತಿಭಾ ಕಾರಂಜಿ ಕಲಿಕೆಗೆ ಪ್ರೇರಕ ಶಕ್ತಿ



**ಜೇವರ್ಗಿ,ಡಿ.11**– 'ಪ್ರತಿಭಾ ಕಾರಂಜಿ ಕಾರ್ಯಕ್ರಮ ವಿದ್ಯಾರ್ಥಿಗಳಲ್ಲಿ ವ್ಯಕ್ತಿತ್ವ ಹಾಗೂ ಸ್ಪರ್ಧಾತ್ಮಕ ಮನೋಭಾವ ರೂಪಿಸಲು ಪೋಷಕರು ಹಾಗೂ ಶಿಕ್ಷಕರನ್ನು ಪ್ರೋತ್ಸಾಹಿಸುತ್ತದೆ. ಜತೆಗೆ ಮಕ್ಕಳ ಕಲಿಕೆಗೆ ಪ್ರೇರಕ ಶಕ್ತಿಯಾಗಿದೆ' ಎಂದು ತಹಶೀಲ್ದಾರ್ ಮಲ್ಲಣ್ಣ ಯಲಗೋಡ ತಿಳಿಸಿದರು.

ತಾಲ್ಲೂಕಿನ ಶಖಾಪೂರ ಎಸ್.ಎ ಗ್ರಾಮದ ಸದ್ಗುರು ವಿಶ್ವರಾಧ್ಯರ ಸಿದ್ದ ಸಂಸ್ಥಾನ ತಪೋವನ ಮಠದ ಆವರಣದಲ್ಲಿ ಬುಧವಾರ ಜಿ.ಪಂ ಕಲಬುರಗಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿ–ಗಳ ಕಾರ್ಯಾಲಯದ ವತಿಯಿಂದ 2025–26ನೇ ಸಾಲಿನ ಜೇವರ್ಗಿ ಮತ್ತು ಯಡ್ರಾಮಿ ತಾಲೂಕು ಮಟ್ಟದ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

'ಕಲಿಕೆ ಎಂದರೆ ಕೇವಲ ಅಂಕ ಗಳಿಕೆ ಅಲ್ಲ. ಕಲಿಕೆ ಜೊತೆ ವಿವಿಧ ಚಟುವಟಿಕೆ ಮೂಲಕ ಮಕ್ಕಳ ಪ್ರತಿಭೆ ಹೊರಹಾಕಲು ಪ್ರತಿಭಾ ಕಾರಂಜಿ ಅನುಕೂಲವಾಗುತ್ತ–

**ಜೇವರ್ಗಿ** : ತಾಲ್ಲೂಕಿನ ಶಖಾಪೂರ ಗ್ರಾಮದಲ್ಲಿ ಆಯೋಜಿಸಲಾಗಿದ್ದ ತಾಲ್ಲೂಕು ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ತಹಶೀಲ್ದಾರ್ ಮಲ್ಲಣ್ಣ ಯಲಗೋಡ ಉದ್ಘಾಟಿಸಿದರು

ಅಲ್ಲದೇ ಹೊಸ ಹೊಸ ಕೌಶಲಗಳು ಕಲಿಯಲು ಪ್ರತಿಭಾ ಕಾರಂಜಿ ಸಹಕಾರಿಯಾಗಲಿದೆ' ಎಂದು ಹೇಳಿದರು.ವಿಶ್ವರಾಧ್ಯರ ತಪೋವನ ಮಠದ ಸಿದ್ದರಾಮ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಕೆಲ್ಲೂರ ಗ್ರಾ.ಪಂ ಅಧ್ಯಕ್ಷೆ ಸಿದ್ದಮ್ಮ ಮಾವನೂರ ಅಧ್ಯಕ್ಷತೆ ವಹಿಸಿದ್ದರು.ಮುಖ್ಯ ಅತಿಥಿಗಳಾಗಿ ಬಿಇಒ ವೀರಣ್ಣ ಬೊಮ್ಮನಹಳ್ಳಿ, ಬಿಆರ್‌ಸಿ ಎಸ್.ಟಿ.ಬಿರಾದಾರ, ನೌಕರರ ಸಂಘದ

ಅಧ್ಯಕ್ಷ ದಾನಪ್ಪಗೌಡ ಹಳಿಮನಿ, ಅಕ್ಷರ ದಾಸೋಹ ಅಧಿಕಾರಿ ಶಿವಲಿಂಗಪ್ಪ, ಶಿವಪುತ್ರ ಬೀರಗೊಂಡ, ರಮೇಶ ವಿಶ್ವಕರ್ಮ, ದತ್ತು ಪೂಜಾರಿ, ಶಿವಕುಮಾರ ಡಂಬಳ ಸೇರಿದಂತೆ ಎರಡೂ ತಾಲ್ಲೂಕಿನ ವಿವಿಧ ಶಾಲೆಯ ವಿದ್ಯಾರ್ಥಿಗಳು, ಪಾಲಕರು ಹಾಜರಿದ್ದರು. ಬಿಇಒ ವೀರಣ್ಣ ಬೊಮ್ಮನಹಳ್ಳಿ ಸ್ವಾಗತಿಸಿದರು. ಶಿಕ್ಷಕ ಗುರುಶಾಂತಪ್ಪ ಚಿಂಚೋಳಿ ಅವರು ನಿರೂಪಿಸಿ, ವಂದಿಸಿದರು.

# ಅಲ್–ಶರ್ರೈ ಸಂಸ್ಥೆಯಿಂದ ವೈದ್ಯಕೀಯ ಸಾಧಕರ ಸನ್ಮಾನ

**ಕಲಬುರಗಿ.ಡಿ.11**– ನಗರದ ಅಲ್–ಶರ್ರೈ ಸಂಸ್ಥೆಗಳ ಸಮೂಹವು 2025 ರ ವೈದ್ಯಕೀಯ ಸೀಟು ಸಾಧಕರ ಮತ್ತು ಶೈಕ್ಷಣಿಕ, ಕ್ರೀಡೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದವರನ್ನು ಸನ್ಮಾನಿಸುವ ಭವ್ಯ ಸನ್ಮಾನ ಸಮಾರಂಭವನ್ನು ಆಯೋಜಿಸಿತ್ತು. ಡಾ.ಎಸ್ ಎಂ ಪಂಡಿತ್ ರಂಗ ಮಂದಿರದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಪೋಷಕರು, ಗಣ್ಯರು ಮತ್ತು ಅಧ್ಯಾಪಕರು ಉತ್ಸಾಹದಿಂದ ಭಾಗವಹಿಸಿದ್ದರು.

ಈ ಕಾರ್ಯಕ್ರಮವು ನೀಟ್ 2025 ರ ಮೂಲಕ ವೈದ್ಯಕೀಯ ಸೀಟುಗಳನ್ನು ಪಡೆದ ವಿದ್ಯಾರ್ಥಿಗಳ ಸಾಧನೆಗಳನ್ನು ಆಚರಿಸಿತು, ಅಲ್–ಶರ್ರೈ ಅವರ ಬಲವಾದ ಶೈಕ್ಷಣಿಕ ಸಂಸ್ಕೃತಿ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅವರ ನಿರಂತರ ಯಶಸ್ಸನ್ನು ಪ್ರದರ್ಶಿಸಿತು. ಪ್ರತಿಯೊಬ್ಬ ಸಾಧಕರಿಗೂ ಟ್ರೋಫಿ ಮತ್ತು ಪ್ರಮಾಣಪತ್ರವನ್ನು ನೀಡಲಾಯಿತು.

ಮುಖ್ಯ ಅತಿಥಿಯಾಗಿ ಆಗಮಿಸಿದ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್ ಅವರು ಸಾಧಕರನ್ನು ಅಭಿನಂದಿಸಿದರು ಮತ್ತು ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ಪ್ರಯಾಣದಲ್ಲಿ ಶಿಸ್ತು, ಗಮನ ಮತ್ತು ಉದ್ದೇಶಪೂರ್ವಕವಾಗಿರಲು ಪ್ರೋತ್ಸಾಹಿಸಿದರು.

ಸಮಾರಂಭದಲ್ಲಿ ಗೌರವಾನ್ವಿತ ಅತಿಥಿಗಳಾಗಿ ಡಾ. ಮೊಹಮ್ಮದ್




ಶಫಿಯುದ್ದೀನ್,ಡಾ. ಫಾರೂಕ್ ಎ ಮನೂರ್,ಡಾ. ಗೌಸುದ್ದೀನ್ ಆರಿಫ್,ಡಾ. ಆರಿಫ್ ರಜಾ ಅಹ್ಮದ್,ಡಾ. ಮೊಹಮ್ಮದ್ ಅಜೀಜ್, ಡಾ. ಸೈಯದ್ ಜಕಾವುಲ್ಲಾ,ಡಾ. ಸೀಮಾ ಅಮರಿನ್ ಬಾನು ಅವರು ಪಾಲ್ಗೊಂಡರು.ಸಂಸ್ಥೆಯು ನೀಟ್,ಕೆ ಸೆಟ್‌ಸಾಧಕರು.ರಾಜ್ಯ ಮಟ್ಟದ ಚಾಂಪಿಯನ್‌ಶಿಪ್‌ಗಳಲ್ಲಿ ಅರ್ಹತೆ ಪಡೆದ ಫುಟ್‌ಬಾಲ್ ಆಟಗಾರರು ಅಲ್–ಶರೆ ಪ್ರೀಮಿಯರ್ ಲೀಗ್ ( ಎಪಿಎಲ್ ) ವಿಜೇತರು, ಥಿಯರಿ ಟಾಪರ್ಸ್‌ಗಳು, ಶೇ.100 ಹಾಜರಾತಿ ಪ್ರಶಸ್ತಿ ಪಡೆದವರು ಮತ್ತು ಸಹಪಠ್ಯ ಚಟುವಟಿಕೆಗಳಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಟ್ರೋಫಿಗಳು ಮತ್ತು ಪ್ರಮಾಣಪತ್ರಗಳನ್ನು ನೀಡಲಾಯಿತು ಈ ಕಾರ್ಯಕ್ರಮದಲ್ಲಿ ಉಪಾಧ್ಯಕ್ಷೆ ಫರ್ಹಾನಾ ರಬ್ಬಾನಿ, ಜಂಟಿ ಮುಖ್ಯ ಟ್ರಸ್ಟಿ ವಫಾಕ್ ಶರೆ ಮತ್ತು ಖಜಾಂಚಿ ಅಮೀನಾ ಫರ್ಹೀನ್ ಉಪಸ್ಥಿತರಿದ್ದರು.ಅಲ್–ಶರೆ ಸಂಸ್ಥೆಗಳ ಸಮೂಹದ ಅಧ್ಯಕ್ಷ ಡಾ. ಅಲ್–ಹಜ್ ಗುಲಾಮ್ ರಬ್ಬಾನಿ ಅವರು ವಿದ್ಯಾರ್ಥಿಗಳ ಸಾಧನೆಗಳು ಮತ್ತು ಸಂಸ್ಥೆಯ ನಿರಂತರ ಪ್ರಗತಿಯ ಬಗ್ಗೆ ಅಪಾರ ಹೆಮ್ಮೆ ವ್ಯಕ್ತಪಡಿಸಿದರು..

# ಪೊಲೀಸ್ ಮುಂಬಡ್ತಿ ಅನುಪಾತ ಹೆಚ್ಚಳಕ್ಕೆ ಕ್ರಮ

**ಬೆಂಗಳೂರು,ಡಿ.11–**ದೈಹಿಕ ಸಧೃಡತೆ ಹೊಂದಿರುವುದು, ಯುವಕರು ಬರಬೇಕೆನ್ನುವ ಕಾರಣಕ್ಕೆ ಮುಂಬಡ್ತಿ ನೀಡುವಾಗ ಶೇ70–30ರ ಅನುಪಾತವನ್ನು ಪೊಲೀಸ್ ಇಲಾಖೆಯಲ್ಲಿ ಅಳವಡಿಸಿದ್ದು, ಇದನ್ನು ಬದಲಾವಣೆ ಮಾಡಲು ಅಗತ್ಯಬಿದ್ದರೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಮೇಲ್ಮನೆಯಲ್ಲಿ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್ ನ ಡಿ.ಟಿ.ಶ್ರೀನಿವಾಸ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು ನೇಮಕಾತಿಗೊಂಡ ಪೇದೆಗಳು ಹೆಚ್ಚಿನ ವಿದ್ಯಾಭ್ಯಾಸ ಹೊಂದಿದ್ದರೆ ಅವರಿಗೆ ಪಿಎಸ್ ಐ ಹುದ್ದೆಗಳ ನೇಮಕಾತಿಯಲ್ಲಿ 7 ವರ್ಷಗಳವರೆಗೆ ಅವಕಾಶ ನೀಡಲಾಗುವುದು ಎಂದು ಹೇಳಿದರು.

ಕ್ರೀಡಾಪಟುಗಳಿಗೆ ಪೊಲೀಸ್ ಸಿಬ್ಬಂದಿಯ ನೇಮಕಾತಿಯಲ್ಲಿ ಶೇ 3 ರಷ್ಟು ಹುದ್ದೆಗಳನ್ನು ಮೀಸಲಿಡಲಾಗಿದೆ ಪದವೀಧರ, ಸ್ನಾತಕೋತ್ತರ ಪದವೀಧರರು ಹೆಚ್ಚು ಪೊಲೀಸ್ ಸಿಬ್ಬಂದಿಯಾಗಿ ನೇಮಕಾತಿಗೊಳ್ಳುತ್ತಿದ್ದಾರೆ ಎಂದು ತಿಳಿಸಿದರು.

ಪೊಲೀಸ್ ಇಲಾಖೆಯ ಎಎಸ್ಐ ಮತ್ತು ಸಿಬ್ಬಂದಿಗಳು ಪಿಎಸ್ ಐ ವೃಂದದ ಪತ್ರಾಂಕಿತ ರಜಾ ದಿವಸಗಳಲ್ಲಿ ಕಾರ್ಯನಿರ್ವಹಿಸಿದ್ದಕ್ಕೆ 15 ದಿವಸಗಳ ವೇತನವನ್ನು 30 ದಿವಸಗಳ ಪರಿಷ್ಕರಿಸುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ ಎಂದು ಹೇಳಿದರು.

ಎಎಸ್ಐ ರವರುಗಳಿಗೆ ಪಿಎಸ್ಐ ಮುಂಬಡ್ತಿ ಹುದ್ದೆಯ ರಿಕ್ತಸ್ಥಾನಕ್ಕೆ ಅನುಗುಣವಾಗಿ ಜೇಷ್ಠತೆಯ ಆಧಾರದ ಮೇಲೆ ವೃಂದ ಮತ್ತು ನೇಮಕಾತಿ ನಿಯಮಾನುಸಾರ ಕನಿಷ್ಠ ವರ್ಷಗಳ ಸೇವೆಯನ್ನು ಪೂರೈಸಿರುವ ಅರ್ಹ 4 ಎಎಸ್ಐ ರವರುಗಳಿಗೆ ಪಿಎಸ್ಐ ಹುದ್ದೆಗೆ ಮುಂಬಡ್ತಿ ನೀಡಲಾಗುತ್ತದೆ.

ಸುಮಾರು 29 ವರ್ಷಗಳು ಇಲಾಖೆಯಲ್ಲಿ ಸೇವೆ ಸಲ್ಲಿಸಿರುವ ಹಾಗೂ ಎಎಸ್ ಐ ಹುದ್ದೆಯಲ್ಲಿ 5 ವರ್ಷ 10 ತಿಂಗಳು ಸೇವೆಯನ್ನು ಪೂರೈಸಿರುವ ಎಎಸ್ ಐ ಗಳಿಗೆ ಮುಂಬಡ್ತಿ ನೀಡಲಾಗುತ್ತಿದೆ ಎಂದರು.

ಕಾನೂನು ಮತ್ತು ಸುವ್ಯವಸ್ಥೆಯ ನಿರ್ವಹಣೆ, ಅಪರಾಧ ತಡೆಗಟ್ಟುವಿಕೆ, ಅಪರಾಧ ಪ್ರಕರಣಗಳ ಪತ್ತೆ ಮತ್ತು ತನಿಖೆ, ಸಂಚಾರ ನಿರ್ವಹಣೆಯ ಕರ್ತವ್ಯ ನಿರ್ವಹಿಸಲು ದೈಹಿಕವಾಗಿ ಯುವ ಮತ್ತು ಮಾನಸಿಕವಾಗಿ ಸದೃಢರಾದ ಹಾಗೂ ತಾಂತ್ರಿಕ ನೈಪುಣ್ಯತೆಯುಳ್ಳ ಅಧಿಕಾರಿಗಳ ಅವಶ್ಯಕತೆ ಇರುತ್ತದೆ.

ಅಲ್ಲದೇ ಇತ್ತೀಚಿನ ದಿನಗಳಲ್ಲಿ ಅಪರಾಧ ಪ್ರಕರಣಗಳು ಹೆಚ್ಚಿನ ತಾಂತ್ರಿಕತೆಯಿಂದ ಕೂಡಿದ್ದು, ಇಂತಹ ಪ್ರಕರಣಗಳ ಪತ್ತೆಗೆ ಹೆಚ್ಚಿನ ತಾಂತ್ರಿಕ ವಿದ್ಯಾರ್ಹತೆಯುಳ್ಳ ಯುವಕರ ಅವಶ್ಯಕತೆ ಇರುವುದರಿಂದ ಮುಂಬಡ್ತಿಯಲ್ಲಿ ಯುವಕರಿಗೆ ಅವಕಾಶ ನೀಡಲಾಗುತ್ತಿದೆ ಎಂದು ಹೇಳಿದರು.

ಸಾಮಾನ್ಯವಾಗಿ ಪೊಲೀಸ್ ಕಾನ್ಸ್-ಟೇಬಲ್ ವೃಂದದ ಸಿಬ್ಬಂದಿಗಳು ಕ್ರಮವಾಗಿ ಹೆಡ್ ಕಾನ್ಸ್ ಟೇಬಲ್ ಮತ್ತು ಎಎಸ್ಐ ಹುದ್ದೆಗಳಿಗೆ 2 ಮುಂಬಡ್ತಿಯನ್ನು ಹೊಂದಿ ನಂತರ ಪಿಎಸ್ಐ(ಸಿವಿಲ್) ಹುದ್ದೆಗೆ ಅರ್ಹರಾಗುತ್ತಾರೆ. ಇವರ ಶಿಕ್ಷಣವು ಮೂಲ ಹುದ್ದೆಯ ಕನಿಷ್ಠ ಮಟ್ಟದ್ದಾಗಿರುವುದರಿಂದ ವರದಿಯಾಗುತ್ತಿರುವ ಅಪರಾಧ ಪ್ರಕರಣ ಬೇಧಿಸುವುದು ಕಷ್ಟಸಾಧ್ಯವಾಗಿರುತ್ತದೆ ಎಂದು ತಿಳಿಸಿದರು.

ಪೊಲೀಸ್ ಇಲಾಖೆಯ ಕಾರ್ಯ ನಿರ್ವಹಣೆ ಹಾಗೂ ಇತರ ಇಲಾಖೆಗಳ ಕಾರ್ಯನಿರ್ವಹಣೆಗೂ ಸಾಕಷ್ಟು ವ್ಯತ್ಯಾಸವಿರುವುದರಿಂದ ಪೊಲೀಸ್ ಇಲಾಖೆಯ ಪಿಎಸ್ಐ ಹುದ್ದೆಯನ್ನು ಇತರ ಇಲಾಖೆಯ ಹುದ್ದೆಗಳೊಂದಿಗೆ ಹೋಲಿಸುವುದು ಸೂಕ್ತವಾಗಿರುವುದಿಲ್ಲ. ಹಿನ್ನಲೆಯಲ್ಲಿ ನಿಯಮಗಳಲ್ಲಿ ಪಿಎಸ್ಐ ಹುದ್ದೆಗೆ ಇಲಾಖೆಯ ವೃಂದ ಮತ್ತು ನೇಮಕಾತಿ ಅನುಭವವುಳ್ಳ ಮತ್ತು ಯುವ ಅಧಿಕಾರಿಗಳನ್ನು



ಪರಿಗಣಿಸಿ ನೇರ ನೇಮಕಾತಿ ಮತ್ತು ಮುಂಬಡ್ತಿಗೆ ಶೇಕಡ 70:30 ನಿಗದಿಪಡಿಸಲಾಗಿದೆ ಎಂದು ವಿವರಿಸಿದರು.

## ನಗರ ವಲಯ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಾಲೋತ್ಸವದಲ್ಲಿ ಮತ್ ವಾಲೆ ಸಾಹೇಬ್ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳ ಉತ್ತಮ ಸಾಧನೆ.



ಧೈರ್ಯದ ದಾರಿ

**ಮಾನ್ವಿ,ಡಿ.11–ಪಟ್ಟಣದ ಕಾಕತೀಯ ಶಾಲೆಯಲ್ಲಿ ನಡೆದ ಮಾನ್ವಿ ನಗರ ವಲಯ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಾಲೋತ್ಸವದಲ್ಲಿ ಮತ್ ವಾಲೆ ಸಾಹೇಬ್ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳು ಉತ್ತಮ ಪ್ರದರ್ಶನ ನೀಡಿ ಒಟ್ಟಾರೆ 8 ಬಹುಮಾನಗಳನ್ನು ತಮದಾಗಿಸಿಕೊಂಡಿದ್ದಾರೆ. ಇದು ಶಾಲೆಯ ಕೀರ್ತಿಯನ್ನು ಇನ್ನಷ್ಟು ಹೆಚ್ಚಿಸಿದೆ.**

**ಈ ಸಾಧನೆಯು ವಿದ್ಯಾರ್ಥಿಗಳ ಕಠಿಣ ಪರಿಶ್ರಮ ಶಿಕ್ಷಕರ ಮಾರ್ಗದರ್ಶನ ಹಾಗೂ ಪೋಷ ಕರ ಪ್ರೋತ್ಸಾಹದ ಫಲವಾಗಿದೆ ಎಂದು ಶಾಲಾ ಆಡಳಿತ ಮಂಡಳಿ ಸಂತಸ ವ್ಯಕ್ತಪಡಿಸಿದೆ.**

# "ಕರ ವಸೂಲಿ ವಿಶೇಷ ಅಭಿಯಾನ"

ಧೈರ್ಯದ ದಾರಿ

**ಪೋತ್ನಾಳ,ಡಿ.11–** ಸ್ಥಳೀಯ ಗ್ರಾಮ ಪಂಚಾಯಿತಿ ವತಿಯಿಂದ ಆಸ್ತಿ ತೆರಿಗೆ, ನೀರಿನ ಶುಲ್ಕ, ವ್ಯಾಪಾರ ಪರವಾನಿಗಿ ಶುಲ್ಕ ಮತ್ತು ಇತರ ಸ್ಥಳೀಯ ಕರಗಳನ್ನು ಸಂಗ್ರಹಿಸಲು ಇಂದು ಮನೆ ಮನೆಗೆ ತೆರಳಿ ಕರ ಕಾರ್ಯಕ್ರಮ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪಿಡಿಒ ಅವರು ಪ್ರತಿ ತಿಂಗಳು ಕರ ನೀಡುವ ಮೂಲಕ ಗ್ರಾಮ ಪಂಚಾಯತಿ ಸದೃಢಗೊಳಿಸಿ ಗ್ರಾಮದ ಅಭಿರುದ್ಧಿಗೆ ಸಹಕರಿಸಬೇಕು ಎಂದರು. ಇದರಿಂದ ಸಂಗ್ರಹವಾದ ಹಣವು ಅಭಿವೃದ್ಧಿ ಕಾರ್ಯಗಳಿಗೆ ಬಳಕೆಯಾಗುತ್ತದೆ. ಈ ಅಭಿಯಾನಗಳು ಕರ ವಸೂಲಾತಿ ಪ್ರಕ್ರಿಯೆಯನ್ನು ಚುರುಕುಗೊಳಿಸಲು ಮತ್ತು ಗರಿಷ್ಠ ತೆರಿಗೆ ಸಂಗ್ರಹಿಸಲು ಆಯೋಜಿಸಲಾಗುತ್ತವೆ. ಕೆಲವು ಬಾರಿ ವಿಶೇಷ ರಿಯಾಯಿತಿಗಳು ಮತ್ತು ಪಾಯಿಂಟ್ ಆಫ್ ಕೇರ್ (ಪಿಒಸಿ) ಯಂತ್ರಗಳನ್ನು ಬಳಸಿ ಮನೆ ಮನೆಗೆ ತೆರಳಿ ವಸೂಲಿ ಮಾಡಲಾಗುತ್ತದೆ.



ಕರ ವಸೂಲಿ ವಿಶೇಷ ಅಭಿಯಾನದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಬಸವರಾಜ್ ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರಾದ ಎ.ಟಿ. ರಮೇಶ್ ಕರ ವಸೂಲಿಗಾರ ಶಿವರಾಜ್ ನಾಯಕ್ ಮತ್ತು ಡಾಟಾ ಎಂಟ್ರಿ ಆಪರೇಟರ್ ನಾಗರಾಜ್ ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದರು.

# ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಅಂತರ ಮಹಾವಿದ್ಯಾಲಯಗಳ ಪಂದ್ಯಾವಳಿ ಯಶಸ್ವಿ



ಧೈರ್ಯದ ದಾರಿ

**ರಾಯಚೂರು,ಡಿ.11–** ಇಲ್ಲಿನ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವ್ಯಾಪ್ತಿಯ ಏಳು ಕೃಷಿ ಮಹಾವಿದ್ಯಾಲಯಗಳ ಅಂತರ ಮಹಾವಿದ್ಯಾಲಯ ಗುಂಪು ಪಂದ್ಯಾವಳಿಗಳು ರಾಯಚೂರಿನ ಕೃ.ವಿ.ವಿಯ ಆವರಣದಲ್ಲಿ ಕೃಷಿ ತಾಂತ್ರಿಕ ಮಹಾವಿದ್ಯಾಲಯದ ವತಿಯಿಂದ ಡಿಸೆಂಬರ್ 6 ರಿಂದ 10ರವರೆಗೆ ಯಶಸ್ವಿಯಾಗಿ ನಡೆದವು.

2025–26ನೇ ಸಾಲಿನ ಅಂತರ ಮಹಾವಿದ್ಯಾಲಯಗಳ ಪುರುಷರ ಹಾಗೂ ಮಹಿಳೆಯರ ಟೇಬಲ್ ಟೆನ್ನಿಸ್, ಕಬಡ್ಡಿ, ವಾಲಿಬಾಲ್ ಮತ್ತು ಖೋ–ಖೋ ಸ್ಪರ್ಧೆಗಳಲ್ಲಿ ಏಳು ಕೃಷಿ, ಸ್ನಾತಕೋತ್ತರ ಮಹಾವಿದ್ಯಾಲಯಗಳಿಂದ 320 ಪುರುಷ ಮತ್ತು 200 ಮಹಿಳಾ ಕ್ರೀಡಾ ಪಟುಗಳು ಭಾಗವಹಿಸಿದ್ದರು.

ಪುರುಷರ ಟೇಬಲ್ ಟೆನ್ನಿಸ್ ವಿಭಾಗದಲ್ಲಿ ರಾಯಚೂರಿನ ಕೃವಿವಿಯ ಸ್ನಾತಕೋತ್ತರ ವಿಭಾಗವು ಚಾಂಪಿಯನ್ ಹಾಗೂ ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು. ಮಹಿಳೆಯರ ಟೇಬಲ್ ಟೆನ್ನಿಸ್ ವಿಭಾಗದಲ್ಲಿ ರಾಯಚೂರಿನ ಕೃಷಿ ತಾಂತ್ರಿಕ ಮಹಾವಿದ್ಯಾಲಯವು ಚಾಂಪಿಯನ್ ಹಾಗೂ ಗಂಗಾವತಿ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು. ಪುರುಷರ ಕಬಡ್ಡಿ ವಿಭಾಗದಲ್ಲಿ ರಾಯಚೂರಿನ ಕೃಷಿ ಮಹಾವಿದ್ಯಾಲಯವು ಚಾಂಪಿಯನ್ ಹಾಗೂ ಗಂಗಾವತಿ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು. ಪುರುಷರ ವಾಲಿಬಾಲ್ ವಿಭಾಗದಲ್ಲಿ ರಾಯಚೂರಿನ ಸ್ನಾತಕೋತ್ತರ ವಿಭಾಗವು ಚಾಂಪಿಯನ್ ಹಾಗೂ ರಾಯಚೂರಿನ ತಾಂತ್ರಿಕ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು.

ಮಹಿಳೆಯರ ವಾಲಿಬಾಲ್ ವಿಭಾಗದಲ್ಲಿ ಗಂಗಾವತಿಯ ಕೃಷಿ ಮಹಾವಿದ್ಯಾಲಯವು ಚಾಂಪಿಯನ್ ಹಾಗೂ ಕಲಬುರಗಿ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು. ಪುರುಷರ ಖೋ–ಖೋ ವಿಭಾಗದಲ್ಲಿ ರಾಯಚೂರಿನ ತಾಂತ್ರಿಕ ಕೃಷಿ ಮಹಾವಿದ್ಯಾಲಯವು ಚಾಂಪಿಯನ್ ಹಾಗೂ ರಾಯಚೂರಿನ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು. ಮಹಿಳೆಯರ ಖೋ–ಖೋ ವಿಭಾಗದಲ್ಲಿ ಕಲಬುರಗಿಯ ಕೃಷಿ ಮಹಾವಿದ್ಯಾಲಯವು ಚಾಂಪಿಯನ್ ಹಾಗೂ ರಾಯಚೂರಿನ ಕೃಷಿ ಮಹಾವಿದ್ಯಾಲಯವು ರನ್ ಆಫ್ ಸ್ಥಾನ ಪಡೆದವು.

ಡಿ.10ರಂದು ಸಮಾರೋಪ ಸಮಾರಂಭ ನಡೆಯಿತು. ಕುಲಪತಿ ಡಾ.ಎಂ.ಹನುಮಂತಪ್ಪ ಅವರು ಮಾತನಾಡಿ, ಕ್ರೀಡಾ

# ಕೈಗಾರಿಕೋದ್ಯಮಿಗಳಿಗೆ ಒಂದು ದಿನದ ಕಾರ್ಯಾಗಾರ ಯಶಸ್ವಿ




ಧೈರ್ಯದ ದಾರಿ

**ರಾಯಚೂರು,ಡಿ.11–** ಜಿಲ್ಲೆಯ ಸಣ್ಣ, ಸೂಕ್ಷ್ಮ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಉತ್ತೇಜನ ನೀಡುವ ಹಾಗೂ ಹೊಸ ಉದ್ಯಮಶೀಲರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ರಾಯಚೂರಿನ ಜಿಲ್ಲಾ ಕೈಗಾರಿಕಾ ಕೇಂದ್ರ ಮತ್ತು ಬೆಂಗಳೂರಿನ ಭಾರತೀಯ ರಫ್ತು ಉತ್ತೇಜನ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ಕೈಗಾರಿಕೋದ್ಯಮಿಗಳಿಗೆ ಒಂದು ದಿನದ ಅರಿವು ಮೂಡಿಸುವ ಕಾರ್ಯಾಗಾರವು ನಗರದ ಹೈದ್ರಾಬಾದ್ ರಸ್ತೆಯ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ಬುಧವಾರ ಯಶಸ್ವಿಯಾಗಿ ನಡೆಯಿತು.

ಬೆಂಗಳೂರಿನ ಫಿವ್ರೋ ಉಪ ನಿರ್ದೇಶಕರಾದ ಧನೀಶಾ ಮೀನು ಅವರು ಕಾರ್ಯಕ್ರಮದಲ್ಲಿ ಭಾಗಿಯಾಗಿ ಜಿಲ್ಲೆಯ ಸಣ್ಣ, ಸೂಕ್ಷ್ಮ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಉತ್ತೇಜನ ನೀಡುವ ಹಾಗೂ ಹೊಸ ಉದ್ಯಮಶೀಲರನ್ನು ಪ್ರೋತ್ಸಾಹಿಸುವ ವಿಷಯಗಳು ಮತ್ತು ರಫ್ತು ವ್ಯಾಪಾರದ ಟ್ರೇಡ್ ಪಾಲಿಸಿ–2023ರ ಕುರಿತು ಸವಿಸ್ತಾರವಾಗಿ ಮಾತನಾಡಿದರು.

ಬೆಂಗಳೂರಿನ ಕಸ್ಟಮ್ಸ್ ಹೌಸ್ ಏಜೆಂಟ್ಸ್ ಅಸೋಷಿಯೇಶನ್ ಲಿಮಿಟೆಡ್ ಕಾರ್ಯದರ್ಶಿಗಳಾದ ಗಿರೀಶ್ ನಾರಾಯಣ್ ಅವರು, ರಫ್ತು ವ್ಯಾಪಾರದ ಕುರಿತು ಅಗತ್ಯ ದಾಖಲಾತಿಗಳನ್ನು ಹೇಗೆ ತಯಾರಿಸುವುದು ಹಾಗೂ ಅಂತರಾಷ್ಟ್ರೀಯ ವ್ಯಾಪಾರ, ಸುಂಕ ತೆರಿಗೆ ಈ ವಿಷಯದ ಕುರಿತು ಸವಿಸ್ತಾರವಾಗಿ ಕಾರ್ಯಾಗಾರದಲ್ಲಿ ತಿಳಿಸಿದರು.

ಈ ವೇಳೆ ಹೈದ್ರಾಬಾದಿನ ಇಸಿಜಿಸಿ ಲಿಮಿಟೆಡ್ ಸಹಾಯಕ ವ್ಯವಸ್ಥಾಪಕರಾದ ಭರತ್ ಗುಂಟೂರು ಅವರು ಮಾತನಾಡಿ, ಇನ್ವಾಯಿಸ್, ಪ್ಯಾಕಿಂಗ್ ಲಿಸ್ಟ್, ಕಸ್ಟಮ್ಸ ಕ್ಲೀಯರೆನ್ಸ್, ರಫ್ತು ವಿಮೆ ಮೂಲಕ ಸಿಗುವ ರಕ್ಷಣೆಗಳು, ಲಾಜಿಸ್ಟಿಕ್ಸ್ ಮತ್ತು ಶಿಪ್ಪಿಂಗ್ ಸರಕುಗಳನ್ನು ಸುರಕ್ಷಿತವಾಗಿ ವಿದೇಶಕ್ಕೆ ಕಳುಹಿಸುವ ವಿಧಾನಗಳು ಹಾಗೂ ಡಿಜಿಟಲ್ ಮಾರ್ಕೆಟಿಂಗ್ ಆನ್ ಲೈನ್ ಮೂಲಕ ವಿದೇಶಿ ಗ್ರಾಹಕರನ್ನು ತಲುಪುವುದು ಹೇಗೆ ಎಂಬುದರ ಬಗ್ಗೆ ತಿಳಿಸಿದರು.

ಈ ವೇಳೆ ಬೆಂಗಳೂರಿನ ಎಫ್.ಕೆ.ಸಿ.ಸಿ.ಐ ನಿರ್ದೇಶಕರು ಹಾಗೂ ಜಿಲ್ಲಾ ವಾಣಿಜ್ಯೋದ್ಯಮ ಸಂಘದ ನಿಕಟಪೂರ್ವ ಅಧ್ಯಕ್ಷರಾದ ತ್ರಿವಿಕ್ರಮ ಜೋಶಿ ಅವರು ಮಾತನಾಡಿದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ರಾಯಚೂರು ಕಚೇರಿಯ ಉಪನಿರ್ದೇಶಕರಾದ ಶ್ರೀ ರಾಜಕುಮಾರ್ ಪಾಟೀಲ್ ಇವರು ಪ್ರಾಸ್ತಾವಿಕವಾಗಿ ಮಾತನಾಡಿ, ಇಲಾಖೆಯ ಯೋಜನೆಗಳ ಕುರಿತು ಸವಿಸ್ತಾರವಾಗಿ ತಿಳಿಸಿದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಬಿ. ಸತೀಶಕುಮಾರ್ ಅವರು ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಅಕ್ಕಿ ಗಿರಣಿ ಮಾಲೀಕರ ಸಂಘದ ಅಧ್ಯಕ್ಷರಾದ ಸಾವಿತ್ರಿ ಪುರುಷೋತ್ತಮ್, ಕಾಟನ್ ಮಿಲ್ಲರ್ಸ್ ಸಂಘದ ಅಧ್ಯಕ್ಷರಾದ ವಿ. ಲಕ್ಷ್ಮೀರೆಡ್ಡಿ, ಕಾರ್ಯದರ್ಶಿ ಜಂಬಣ್ಣ ಯಕ್ಲಾಸಪೂರು ಇನ್ನಿತರರು ಇದ್ದರು. ಕಚೇರಿಯ ಸಹಾಯಕ ನಿರ್ದೇಶಕರಾದ ಲಕ್ಷ್ಮೀಕಾಂತ್ ಕುಲಕರ್ಣಿ ವಂದಿಸಿದರು.

# 2.84 ಲಕ್ಷ ಖಾಲಿ ಹುದ್ದೆ ಭರ್ತಿಗೆ ಕ್ರಮ

**ಬೆಂಗಳೂರು,ಡಿ.11–**ರಾಜ್ಯದ ಕೃಷಿ, ಇಂಧನ, ಸಾರಿಗೆ,ಆರೋಗ್ಯ,ಶಿಕ್ಷಣ ಸೇರಿ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ 2ಲಕ್ಷ 84 ಸಾವಿರ 881 ಹುದ್ದೆಗಳನ್ನು ಹಂತಹಂತವಾಗಿ ಭರ್ತಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೇಲ್ಮನೆಯಲ್ಲಿ ತಿಳಿಸಿದರು.



ಪ್ರಶ್ನೋತ್ತರ ವೇಳೆಯಲ್ಲಿ ಇಂದು ಬಿಜೆಪಿಯ ಹನುಮಂತ ನಿರಾಣಿ ಅವರ ಪ್ರಶ್ನೆಗೆ ಉತ್ತರ ನೀಡಿದ ಮುಖ್ಯಮಂತ್ರಿಗಳು ಒಳ ಮೀಸಲಾತಿ ಜಾರಿಯ ವಿಳಂಬದಿಂದ ಖಾಲಿ ಹುದ್ದೆಗಳ ಭರ್ತಿಗೆ ತಡವಾಗಿತ್ತು ಎಂದು ಹೇಳಿದರು.

ಈಗಾಗಲೇ ಒಳ ಮೀಸಲಾತಿ ಜಾರಿಯಾಗಿರುವುದರಿಂದ ಖಾಲಿ ಹುದ್ದೆಗಳ ನೇಮಕಾತಿಯು ವೇಗವಾಗಲಿದೆ ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಹಂತಹಂತವಾಗಿ ಭರ್ತಿ ಮಾಡಲಾಗುವುದು ಎಂದು ತಿಳಿಸಿದರು. ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಹುದ್ದೆಗಳ ಭರ್ತಿಯನ್ನು ವೃಂದ ಮತ್ತು ನೇಮಕಾತಿ ನಿಯಮಗಳ್ವಯ ಆರ್ಥಿಕ ಇಲಾಖೆಯಿಂದ ಅನುಮೋದಿತವಾದ ಹುದ್ದೆಗಳನ್ನು ಕಾಲಕಾಲಕ್ಕೆ ಭರ್ತಿ ಮಾಡಲು ನಿಯಮಾನುಸಾರ ಕ್ರಮಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಕಳೆದ 3 ವರ್ಷಗಳಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳ ಮೂಲಕ 8157 ಹುದ್ದೆಗಳ ನೇಮಕಾತಿಯನ್ನು ಪೂರ್ಣಗೊಳಿಸಲಾಗಿದೆ ಹಾಗೂ 3081 ಹುದ್ದೆಗಳ ನೇಮಕಾತಿಯು ಪ್ರಗತಿಯಲ್ಲಿದೆ ಎಂದರು. ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ 24300 ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ನೀಡಿದೆ,ಅಧಿಕಾರಿ / ನೌಕರರ ನಿಧನ, ವಯೋ ನಿವೃತ್ತಿ ಮತ್ತು ಸ್ವಯಂ ನಿವೃತ್ತಿಯಿಂದ ತೆರವಾಗುವ ಹುದ್ದೆಗಳನ್ನು ಆಯಾ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಆರ್ಥಿಕ ಇಲಾಖೆಯಿಂದ ಅನುಮೋದನೆ ಮಾಡಲಾಗುತ್ತಿದೆ.

ಇಲಾಖೆಗಳು ಖಾಲಿ ಇರುವ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯಿಂದ ಒಂದು ಬಾರಿ ಸಹಮತಿಯನ್ನು ಪಡೆದ ನಂತರ, ಮತ್ತೊಮ್ಮೆ ಸಹಮತಿಯನ್ನು ಕೋರುವ ಅಗತ್ಯವಿರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

**Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.**
**Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE**